ಸಂಪುಟ : 9 ಸಂಚಿಕೆ 04 ಪುಟ : 4 ಬೆಲೆ : 3.00 ಮಂಗಳವಾರ ಜನವರಿ 30, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 04 Pages : 4 Price : 3.00 Tuesday JANUARY 30, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್.ಕೆ. ಪಾಟೀಲ ಅವರ ಇಂದಿನ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸದ ವಿವರ ಇಂತಿದೆ.

ಸಚಿವರು ದಿ. 30 ರಂದು ಮುಂಜಾನೆ 9.15 ಗಂಟೆಗೆ ನಗರದ ಹೊಸ ಬಸ್ ನಿಲ್ದಾಣದಲ್ಲಿ ಅಂಬಾರಿ ಬಸ್ಸ್ ಸೇವೆಗೆ ಚಾಲನೆ ನೀಡುವರು. 9.30 ಗಂಟೆಗೆ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಕಾಂಗ್ರೆಸ್ ಕಚೇರಿಯಲ್ಲಿ ಮಹಾತ್ಮ ಗಾಂಧೀಜಿಯವರ ಪುಣ್ಯತಿಥಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮುಂಜಾನೆ 10 ಗಂಟೆಗೆ ಮುಂಡರಗಿ ತಹಸೀಲ್ದಾರ ಕಾರ್ಯಾಲಯದ ಮೊದಲನೇ ಮಹಡಿಯಲ್ಲಿನ ಅಭಿಲೇಖಾಲಯದ ಶಾಶ್ವತವಾಗಿರುವ ಕಡತಗಳನ್ನು ಸ್ಕ್ಯಾನಿಂಗ್ ಮತ್ತು ಕ್ಯಾಟಲಾಗಿಂಗ್ ಇಂಗಿಕ್ಸಿಂಗ್ ಡಿಜಿಟೈಸೇಶನ ದಾಖಲೀಕರಣ ಉದ್ಘಾಟಿಸುವರು. 10.15 ಕ್ಕೆ ಮುಂಡರಗಿಯ ಶ್ರೀ. ಅನ್ನದಾನೇಶ್ವರ ಕಲ್ಯಾಣ ಮಂಟಪದಲ್ಲಿ ಜನತಾ ದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ರಾ. 8 ಗಂಟೆಗೆ ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ ಆಡಳಿತ ಭವನದಲ್ಲಿ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ ಕುಲಪತಿಗಳೊಂದಿಗೆ ಸಭೆ ಜರುಗಿಸಿ ರಾ. 10.20ಕ್ಕೆ ಹುಬ್ಬಳ್ಳಿಯಿಂದ ಬೆಂಗಳೂರಿಗೆ ರೈಲಿನ ಮೂಲಕ ಪ್ರಯಾಣ ಬೆಳೆಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

### 'ಕೂಸಿನ ಮನೆ' ಆರೈಕೆದಾರರ ತರಬೇತಿ ಸಮಾರೋಪ ಸಮಾರಂಭದಲ್ಲಿ ರವಿ ಎ.ಎನ್

## ತಾಲೂಕಿನ 'ಕೂಸಿನ ಮನೆ'ಗಳನ್ನು ಮಾದರಿಯಾಗಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಕೂಸಿನ ಮನೆಯ ಆರೈಕೆದಾರರು ಅತ್ಯುತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುವ ಮೂಲಕ ತಾಯಿಯನ್ನು ಸಹ ಮಕ್ಕಳು ಮರೆಯುವ ಹಾಗೆ ವ್ಯಕ್ತಿತ್ವ ರೂಪಿಸಿಕೊಳ್ಳಿ. ಮಕ್ಕಳಲ್ಲಿ ಯಾವುದೇ ಬೇಧ-ಭಾವ ಮೂಡಿಸದೇ ತಮಗೆ ವಹಿಸಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿ, ರೋಣ ತಾಲೂಕಿನ ಕೂಸಿನ ಮನೆಗಳನ್ನು ರಾಜ್ಯದಲ್ಲೇ ಮಾದರಿಗೊಳಿಸಬೇಕೆಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ರವಿ ಎ.ಎನ್ ಹೇಳಿದರು.

ರೋಣ ತಾಲೂಕಿನ ಕುರಹಟ್ಟಿ ಗ್ರಾ.ಪಂ ವ್ಯಾಪ್ತಿಯಲ್ಲಿ ಕೂಸಿನ ಮನೆಯಲ್ಲಿ ನಡೆದ ಕೂಸಿನ ಮನೆ ಆರೈಕೆದಾರರ ಮೂರು ದಿನಗಳ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲೂಕಿನ ಸಹಾಯಕ ನಿರ್ದೇಶಕ (ಗ್ರಾ.ಉ) ರಿಯಾಜ್ ಖತೀಬ್, ಕೂಸಿನ ಮನೆಯ ಆರೈಕೆದಾರರು ಕೇವಲ ವೇತನಕ್ಕಾಗಿ ದುಡಿಯದೇ ಮಕ್ಕಳ ಸೇವೆಯನ್ನು ಮಾಡುತ್ತಿದ್ದೇವೆಂದು ತಿಳಿದು ಕೆಲಸ ಮಾಡಬೇಕು. ನರೇಗಾ ಕೂಲಿಕಾರರ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಬೆಳಸುವ ಕಾರ್ಯವನ್ನು ಆರೈಕೆದಾರರು ಮಾಡಬೇಕೆಂದರು.



ಐಇಸಿ ಸಂಯೋಜಕ ವ್ಹಿ.ಎಸ್ ಸಜ್ಜನ ಮಾತನಾಡಿ, ಯಾವುದೇ ಕೀಳರಿಮೆಗೆ ಒಳಗಾಗದೇ ಆತ್ಮವಿಶ್ವಾಸದಿಂದ ಕೂಸಿನ ಮನೆಯನ್ನು ಆರೈಕೆದಾರರು ನಿರ್ವಹಿಸಬೇಕು. ಗ್ರಾಮಸ್ಥರ ಮತ್ತು ನರೇಗಾ ಕೂಲಿಕಾರರಲ್ಲಿ ಕೂಸಿನ ಮನೆಯ ಬಗ್ಗೆ ಹೆಚ್ಚು ವಿಶ್ವಾಸ ಮೂಡಿಸಿದ್ದೇ ಆದಲ್ಲಿ ಕೂಸಿನ ಮನೆಯಲ್ಲಿ ಮಕ್ಕಳ ಸಂಖ್ಯೆ ಹೆಚ್ಚಳಳವಾಗಲಿದೆ ಎಂದರು.

ತರಬೇತಿ ಕಾರ್ಯಾಗಾರದ ಕೊನೆಯ ದಿನ ಕುರಹಟ್ಟಿ ಗ್ರಾ.ಪಂ ಕೂಸಿನ ಮನೆಯಲ್ಲಿ ತರಬೇತಿಯಲ್ಲಿ ಭಾಗವಹಿಸಿದ ತಾಲೂಕಿನ ಆರೈಕೆದಾರರಿಗೆ ಕೂಸಿನ ಮನೆಯ ಪ್ರಾತ್ಯಕ್ಷಿಕೆಯನ್ನು ನೀಡಲಾಯಿತು. ಜಿಲ್ಲಾ ಐಇಸಿ ಸಂಯೋಜಕರು ಕೂಸಿನ ಮನೆಯಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳನ್ನು ಹಾಗೂ ನಿರ್ವಹಿಸಬೇಕಾದ ದಾಖಲೆಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು.

ಸಮಾರೋಪ ಸಮಾರಂಭಕ್ಕೆಎ ಗ್ರಾ.ಪಂ ಅಧ್ಯಕ್ಷ ಸಿದ್ದನಗೌಡ ಪಾಟೀಲ್ ಚಾಲನೆ ನೀಡಿದರು. ಕುರಹಟ್ಟಿ ಗ್ರಾ.ಪಂ ಉಪಾಧ್ಯಕ್ಷರು, ಸದಸ್ಯರು, ತಾಲೂಕಿನ ಕೂಸಿನ ಮನೆಗಳ ಆರೈಕೆದಾರರು, ಗ್ರಾ.ಪಂ ಸಿಬ್ಬಂದಿಗಳು ಭಾಗವಹಿಸಿದ್ದರು. ಮಂಜುನಾಥ ನಿರೂಪಿಸಿ ವಂದಿಸಿದರು.

> ಮೂರು ದಿನಗಳಿಂದ ತರಬೇತಿ ಪಡೆದಿರುವ ಕೂಸಿನ ಮನೆಯ ಆರೈಕೆದಾರರು ತಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಲ್ಲಿ ಶ್ರಮಿಸಬೇಕು. ಕೂಸಿನ ಮನೆಯಲ್ಲಿ ಮಕ್ಕಳ ಸುರಕ್ಷತೆಯ ಬಗ್ಗೆ ಗಮನವಹಿಸಿ, ಪಾಲಕರಲ್ಲೂ ಕೂಸಿನ ಮನೆಯ ಕಾರ್ಯಕ್ಷಮತೆಯ ಬಗ್ಗೆ ವಿಶ್ವಾಸ ಮೂಡಿಸುವ ಕೆಲಸವನ್ನು ಆರೈಕೆದಾರರು ಮಾಡಬೇಕು ಎಂದು ರವಿ ಎ.ಎನ್ ತಿಳಿಸಿದರು.

## ಆಟೋ ಚಾಲಕ, ಮಾಲಕರೂ ಕಾರ್ಮಿಕ ಇಲಾಖೆ ವ್ಯಾಪ್ತಿಗೆ




■ವಿಜಯಸಾಕ್ಷಿ ಸುದ್ದಿ, ಗದಗ

ಆಟೋ ಚಾಲಕ, ಮಾಲಕರನ್ನು ಕಾರ್ಮಿಕ ಇಲಾಖೆ ವ್ಯಾಪ್ತಿಗೆ ತಂದು, ಕಾರ್ಮಿಕ ಇಲಾಖೆಯಿಂದ ದೊರೆಯುವ ಸರ್ಕಾರ ಎಲ್ಲ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಶ್ರೀಘ್ರದಲ್ಲೇ ಪೂರಕ ಕಾನೂನು ರಚಿಸಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಅಂಬೇಡ್ಕರ್ ಸಭಾ ಭವನದಲ್ಲಿ ಆಟೋ ಚಾಲಕರ, ಮಾಲಕರ ಸಂಘಟನೆಗಳ ಒಕ್ಕೂಟದ ವತಿಯಿಂದ ಜರುಗಿದ ರಾಜ್ಯ ಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದ ಸಚಿವರು, ಆಟೋ ಚಾಲಕರು ಹಾಗೂ ಮಾಲಕರ ಬೇಡಿಕೆಗಳನ್ನು ಪ್ರಾಮಾಣಿಕವಾಗಿ ಈಡೇರಿಸುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಆಟೋ ಚಾಲಕರು ಮತ್ತು ಮಾಲಕರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಬಹು ದಿನಗಳಿಂದ ಅವರ ಬೇಡಿಕೆ ಬೇಡಿಕೆಯಾಗಿಯೇ ಉಳಿದಿದೆ. ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಕಾರ್ಮಿಕರ ಹಲವು ಬೇಡಿಕೆಗಳನ್ನು ಈಡೇರಿಸಲಾಗಿದೆ. ಅಂತೆಯೇ ಆಟೋ ಚಾಲಕರು ಮತ್ತು ಮಾಲಕರ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದರು.

ಸಂಘದ ಜಿಲ್ಲಾಧ್ಯಕ್ಷ ವಿಜಯ ಕಲ್ಮನಿ, ಎಸ್.ಎನ್. ಬಳ್ಳಾರಿ, ಮಂಜುನಾಥ ಅಗಸಿಮನಿ, ಬಾಬಾಜಾನ ಬಳಗಾನೂರ, ಬಸವರಾಜ ಮನಗುಂಡಿ, ಹನಮಂತ ಗೆಜ್ಜಳ್ಳಿ, ಮುಂತಾದವರು ಉಪಸ್ಥಿತರಿದ್ದರು.

### ಪರಸ್ಪರ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಸುವರ್ಣಾವಕಾಶ

## ಮಾರ್ಚ್ 9ಕ್ಕೆ ರಾಷ್ಟ್ರೀಯ ಲೋಕ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಮಾರ್ಚ್ 9ರಂದು 'ರಾಷ್ಟ್ರೀಯ ಲೋಕ ಅದಾಲತ್' ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.




ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನವೊಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಮಾರ್ಚ್ 9ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್‌ಎಮ್‌ಆರ್‌ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

## ಅತ್ಯಾಧುನಿಕ ತಂತ್ರಜ್ಞಾನ ಪರಿಚಯಿಸುವ ತರಬೇತಿ ಅವಶ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಏನನ್ನಾದರು ಹೂಡಿಕೆ ಮಾಡಿದರೆ ಅದು ಅವರ ಮುಂದಿನ ಭವಿಷ್ಯದ ಜೀವನಕ್ಕೆ ಹೂಡಿಕೆ ಮಾಡಿದಂತಾಗುತ್ತದೆ ಎಂದು ಲಿವಿಂಗ್ ಥಾಟ್ಸ್‌ನ ಸಿಇಓ ಸಂತೋಷ ಮಿಶ್ರಾ ಹೇಳಿದರು.

ಜಿಲ್ಲಾಡಳಿತ ಭವನದ ಸಾರ್ವಜನಿಕ ಶಿಕ್ಷಣ ಇಲಾಖೆಯ ಕಾರ್ಯಾಲಯದಲ್ಲಿ ಸೋಮವಾರ ಮಾತನಾಡಿದ ಅವರು, ಶಾಲಾ ಶಿಕ್ಷಣ ಇಲಾಖೆ ಗದಗ ಹಾಗೂ ಲಿವಿಂಗ್ ಥಾಟ್ಸ್‌ನ ಜಂಟಿ ಸಹಯೋಗದಲ್ಲಿ ಕೃತಕ ಬುದ್ಧಮತ್ತೆ, ವಿಜ್ಞಾನ-ತಂತ್ರಜ್ಞಾನ, ಇಂಜಿನಿಯರಿಂಗ್ ಮತ್ತು ಗಣಿತದ ಬಗ್ಗೆ 200 ಶಾಲೆಯ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಕುರಿತು ತಿಳಿಸಿದರು.

ತಂತ್ರಜ್ಞಾನದ ಕೌಶಲ್ಯ ಹಾಗೂ ಅನುಭವನ್ನು ಹೆಚ್ಚಿಸಿ ಮುಂದಿನ ಪೀಳಿಗೆಯ ನವೋದ್ಯಮಿಗಳನ್ನು ಸೃಷ್ಟಿಸಿ ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಜ್ಞಾನದ ವ್ಯತ್ಯಾಸವನ್ನು ಕಡಿಮೆಗೊಳಿಸುವುದು, ವಿದ್ಯಾರ್ಥಿಗಳಿಗೆ ವಿಮರ್ಶಾತ್ಮಕ ಚಿಂತನೆ, ಸಮಸ್ಯೆ ಪರಿಹರಿಸುವ ಗುಣಗಳನ್ನು ಬೆಳಸುವುದರೊಂದಿಗೆ ರಾಜ್ಯ ಹಾಗೂ ದೇಶದ ಪ್ರಗತಿಗೆ ಕೊಡುಗೆ ನೀಡುವುದೇ ಈ ತರಬೇತಿಯ ಮುಖ್ಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಶ್ರೀಧರ ಬಡಿಗೇರ ಹಾಜರಿದ್ದರು.

### ರಿಂಗ್ ರೋಡ್ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

## ಕಾಮಗಾರಿ ಪೂರ್ಣಗೊಳಿಸಲು ಸೂಕ್ತ ಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಜಿಲ್ಲಾ ಕೇಂದ್ರವಾದ ಗದಗನಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ ರಿಂಗ್ ರೋಡ್ ಕಾಮಗಾರಿಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಹೇಳಿದರು.

ನಗರದ ಹಾಲತಗೇರಿ ರಸ್ತೆಯ ಆರ್ಕಿಡ್ ಕಾಂಪ್ಲೆಕ್ಸ್ ಹತ್ತಿರ ಲೋಕೋಪಯೋಗಿ ಇಲಾಖೆಯಿಂದ ಅಬ್ದುಲ್ ಕಲಾಂ ಶಾದಿಮಹಲ್ ರಸ್ತೆಯಿಂದ ಸಂಬಾಪುರ ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರವಿವಾರ ಭೂಮಿಪೂಜೆ ನೆರವೇರಿಸಿ ಸಚಿವರು ಮಾತನಾಡಿದರು.



ಇಂದು 4 ಕೋಟಿ ಅನುದಾನದಲ್ಲಿ 1.9 ಕಿ.ಮೀ ರಿಂಗ್ ರೋಡ್ ಅಭಿವೃದ್ಧಿಪಡಿಸುವ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮುಂಬರುವ ದಿನಗಳಲ್ಲಿ ರಿಂಗ್ ರೋಡ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಎಂದರು.

ಸಿಎಂ ಸಿದ್ಧರಾಮಯ್ಯ ಅವರು ಶಾಸಕರಿಗೆ 25 ಕೋಟಿ ರೂ. ಅನುದಾನ ನೀಡುವ ಭರವಸೆ ನೀಡಿದ್ದು, ಅದನ್ನು ಅತ್ಯಂತ ಅಗತ್ಯ ಹಾಗೂ ಅನಿವಾರ್ಯ ಕಾಮಗಾರಿಗಳಿಗೆ ಬಳಸಲು ತಿಳಿಸಿದ್ದಾರೆ. ಈ ಅನುದಾನದಲ್ಲಿಯೂ ಸಹ ನಗರದ ಕಾಮಗಾರಿಗಳನ್ನು ಕೈಗೊಳ್ಳಲು ಬಳಸಲಾಗುವುದು ಎಂದು ತಿಳಿಸಿದರು.

ಕಳೆದ ಸಾಲಿನ ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳಲ್ಲಿ ಪೂರ್ಣವಾಗದ ಹಾಗೂ ಆರಂಭವಾಗದ ಅಂದಾಜು 15 ಕಾಮಗಾರಿಗಳು ಬಾಕಿ ಇದ್ದು, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಕುರಿತು ಗಮನಹರಿಸಬೇಕು.

▸▸ 3ನೇ ಪುಟಕ್ಕೆ

> ದೋಭಿ ಘಾಟ್‌ನಿಂದ ಮುಂಡರಗಿ ರಸ್ತೆ, ಅಲ್ಲಿಂದ ಬೆಟಗೇರಿ, ನಂತರ ಹೊಂಬಳ ರಸ್ತೆ ಸಂಪರ್ಕ ಕಲ್ಪಿಸಿದರೆ ರಿಂಗ್‌ರೋಡ್ ಕಾಮಗಾರಿ ಪೂರ್ಣಗೊಳ್ಳಲಿದೆ. ಇದಕ್ಕಾಗಿ 241 ಕೋಟಿ ರೂ. ಅನುದಾನ ಅಗತ್ಯವಾಗಿದೆ ಎಂದರು. ಲೋಕೋಪಯೋಗಿ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ ಅವರು ರಿಂಗ್‌ರೋಡ್ ಕಾಮಗಾರಿ ಕೈಗೊಳ್ಳಲು ಅಗತ್ಯವಿರುವ ಅನುದಾನವನ್ನು ನೀಡುವ ಭರವಸೆ ನೀಡಿದ್ದು, ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.
>
> **– ಎಚ್.ಕೆ. ಪಾಟೀಲ.**
>
> ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವರು.

## ಸಾಕ್ಷಿ ಸುಭಾಷಿತ

ಸಾಧ್ಯವಾದರೆ ಹತ್ತು ಜನರಿಗೆ ನೆರವಾಗು, ಆಗದಿದ್ದರೆ ಹಾದಿಯಲ್ಲಿ ಕಾಣುವ ಗಾಜಿನ ಚೂರನ್ನಾದರೂ ಹೆಕ್ಕಿ ಕಸದ ತೊಟ್ಟಿಗೆ ಹಾಕು.

–ಕಣ್ಣದಾಸನ್

## ಸಂಪಾದಕೀಯ

# ಆಯಾ ಕುಮಾರ್ ಗಯಾ ಕುಮಾರ್

ಬಿಹಾರ ರಾಜಕಾರಣದ ಇಂದಿನ ಸ್ಥಿತಿಗತಿಗಳನ್ನು ನೋಡಿದರೆ ಆಯಾ ಕುಮಾರ್ ಗಯಾ ಕುಮಾರ್ ಎಂದು ಮಕ್ಕಳು ಆಡಿಕೊಳ್ಳುವಂತಾಗಿದೆ. ಈ ಮಾತು ಬಿಹಾರದ ನೂತನ ಮುಖ್ಯಮಂತ್ರಿ ನಿತೀಶ್ ಕುಮಾರ್‌ಗೆ ಸಂಬಂಧಿಸಿದ್ದು ಎಂದು ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ.

ನಿತೀಶಕುಮಾರ್ ಒಟ್ಟಾರೆ 9ನೆ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿ ದಾಖಲೆ ನಿರ್ಮಿಸಿದ್ದಾರೆ. ಒಟ್ಟಾರೆ 9ನೆ ಬಾರಿ ಪ್ರಮಾಣವಚನ ಸ್ವೀಕರಿಸಿದ್ದಾರೆ ವಿನಃ, 9ನೆ ಅವಧಿಗೆ ಮುಖ್ಯಮಂತ್ರಿಯಾಗಿ ಅಲ್ಲ ಎನ್ನುವುದು ಗಮನಿಸಬೇಕಾದ ವಿಷಯ.

ಬಿಹಾರದಲ್ಲಿ ನಿತೀಶ್ ಕುಮಾರ್ ಹೊಸ ಮೈತ್ರಿಕೂಟ ಸೇರಿಕೊಳ್ಳುವುದು ಅಥವಾ ಸೃಷ್ಟಿಸಿಕೊಳ್ಳುವುದು ಹೊಸತೇನಲ್ಲ. ಬಿಹಾರದಲ್ಲಿ ಮೈತ್ರಿಕೂಟ ರಾಜಕೀಯ ಹೊಸದೂ ಅಲ್ಲ. ಸದ್ಯ ನಿತೀಶ್ ಕುಮಾರ್ ಅವರನ್ನೆ ತೆಗೆದುಕೊಂಡಲ್ಲಿ ಕಳೆದೊಂದು ದಶಕದಲ್ಲಿ 5 ಬಾರಿ ಮೈತ್ರಿಕೂಟ ಅದಲು ಬದಲು ಮಾಡಿಕೊಂಡಿದ್ದಾರೆ.

ಸದ್ಯ ಕಾಂಗ್ರೆಸ್ ಒಳಗೊಂಡ ಇಂಡಿಯಾ ಮೈತ್ರಿಕೂಟ ಬಿಟ್ಟು ಎನ್ ಡಿಎ ಸೇರಿರುವ ನಿತೀಶ್ ಕುಮಾರ್, ಕೇವಲ 18 ತಿಂಗಳ ಹಿಂದಷ್ಟೆ ಎನ್ ಡಿಎ ಮೈತ್ರಿಕೂಟದಿಂದ ಹೊರಬಂದಿದ್ದರು. ಸದ್ಯ ಅದೇ ಎನ್ ಡಿಎ ಮೈತ್ರಿಕೂಟದ ಸಖ್ಯ ಬೆಳೆಸಿ ಮತ್ತೊಮ್ಮೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

ಕರ್ನಾಟಕದ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ 9 ತಿಂಗಳ ಹಿಂದಷ್ಟೆ ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾಗಿದ್ದರು. 9 ತಿಂಗಳ ಅಂತರದಲ್ಲಿ ಮತ್ತೆ ಮಾತೃ ಪಕ್ಷಕ್ಕೆ ಮರಳಿದ್ದಾರೆ. ನಿತೀಶ್ ಕುಮಾರ್ ಗೆ ಹೋಲಿಕೆ ಮಾಡಿದಲ್ಲಿ ಜಗದೀಶ್ ಶೆಟ್ಟರ್ ಅತ್ಯಂತ ವೇಗವಾಗಿ ಪಕ್ಷಾಂತರ ಮಾಡಿದ್ದಾರೆ ಎನ್ನಬಹುದು. ಆದರೆ ಜಗದೀಶ್ ಶೆಟ್ಟರ್ ಹೀಗೆ ಪಕ್ಷಾಂತರ ಮಾಡಿದ್ದು ಇದೇ ಮೊದಲು. ನಿತೀಶ್ ಕುಮಾರ್ ಹೀಗೆ ನಿಷ್ಠೆ ಬದಲಿಸುವುದರಲ್ಲಿ ನಿಸ್ಸೀಮರು.

ನಿತೀಶ್ ಕುಮಾರ್ ಇಂಡಿಯಾ ಮೈತ್ರಿಕೂಟ ತೊರೆದಿದ್ದರಿಂದ ಸದ್ಯ ಯಾವುದೇ ಲಾಭ ನಷ್ಟ ಇಲ್ಲ. ಆದರೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕೈಗೊಂಡ ನ್ಯಾಯಯಾತ್ರೆ ಬಿಹಾರ ಪ್ರವೇಶಿಸಿದ್ದಾಗಲೇ ಇಂಥದ್ದೊಂದು ಬೆಳವಣಿಗೆ ನಡೆದಿರುವುದು ಇರಿಸು ಮುರಿಸು ತಂದಿದೆ. ಅದರಲ್ಲೂ ಇಂಡಿಯಾ ಮೈತ್ರಿಕೂಟ ಗಟ್ಟಿಗೊಳ್ಳುವ ಮುನ್ನವೇ ಬಿರುಕು ಮೂಡಿರುವುದು ಹೊಸದೊಂದು ಚರ್ಚೆಗೆ ಕಾರಣವಾಗುತ್ತಿದೆ.

ಮನೆ ಗೆದ್ದು... ಗಾದೆ ಮಾತಿನಂತೆ ಕಾಂಗ್ರೆಸ್ ಮೊದಲು ದೇಶದ ಯಾವೆಲ್ಲಾ ರಾಜ್ಯದಲ್ಲಿ ಮೈತ್ರಿ ಮಾಡಿಕೊಂಡು ಸರಕಾರ ರಚಿಸಿದೆ. ಅಲ್ಲಿ ಮೈತ್ರಿಯನ್ನು ಮತ್ತಷ್ಟು ಗಟ್ಟಿಗೊಳಿಸುವ ಕೆಲಸ ಮಾಡಬೇಕಿತ್ತು. ಅದಾದ ನಂತರ ಇಂಡಿಯಾ ಮೈತ್ರಿಕೂಟ ಗಟ್ಟಿಗೊಳಿಸುವ ಕೆಲಸಕ್ಕೆ ಕೈ ಹಾಕಬೇಕಿತ್ತು. ಆದರೆ ರಾಜ್ಯಗಳ ಮೈತ್ರಿಯನ್ನು ಮರೆತು, ಕೇವಲ ರಾಷ್ಟ್ರಮಟ್ಟದ ರಾಜಕಾರಣವನ್ನೆ ಕೇಂದ್ರೀಕರಿಸಿದ್ದರಿಂದ ಇವತ್ತು ಬಿಹಾರದಲ್ಲಿ ಇಂಡಿಯಾ ಮೈತ್ರಿಕೂಟಕ್ಕೆ ಆರಂಭಿಕ ಹಿನ್ನಡೆಯಾಗಿದೆ. ಭವಿಷ್ಯದ ಲೋಕಸಭೆ ಚುನಾವಣೆಯಲ್ಲಿ ಇದು ಯಾವ ರೀತಿ ಪರಿಣಾಮ ಬೀರುತ್ತದೆ ಎನ್ನುವುದನ್ನು ಕಾದು ನೋಡಬೇಕಿದೆ.

## ಭಾವೈಕ್ಯತೆ ಸಾರುವ ಈ ಬಾರಿಯ ಸಂಭ್ರಮದ 'ರೊಟ್ಟಿ ಜಾತ್ರೆ'ಗೆ ಲಾಲಸಾಬ ಅರಗಂಜಿ ಸಾರಥಿ

# ಉತ್ತರ ಕರ್ನಾಟಕದ ಪ್ರಸಿದ್ಧ ರೊಟ್ಟಿ ಜಾತ್ರೆ

ರಾಜ್ಯದಲ್ಲಿ ಲಿಂಗಾಯತ ಧರ್ಮದ ಮಠಗಳು ವಿಶಿಷ್ಠ ಹಾಗೂ ವಿಭಿನ್ನತೆಯ ಸಮಾನತೆಯ ಸಂದೇಶ ಸಾರುತ್ತಾ ಬಂದಿವೆ. ಅಕ್ಷರ ದಾಸೋಹ, ಅನ್ನ ದಾಸೋಹ, ಭಾವೈಕ್ಯತೆಯ ಸಂದೇಶ, ಬಸವ ತತ್ವವೇ ಲಿಂಗಾಯತ ಮಠಗಳ ಜೀವಾಳ.

'ಇವನಾರವ, ಇವನಾರವ, ಇವನಾರವ
ನೆಂದೆನಿಸದಿರಯ್ಯಾ.
ಇವ ನಮ್ಮವ, ಇವ ನಮ್ಮವ, ಇವ
ನಮ್ಮವನೆಂದೆನಿಸಯ್ಯಾ.
ಕೂಡಲಸಂಗಮದೇವಾ, ನಿಮ್ಮ ಮನೆಯ
ಮಗನೆನಿಸಯ್ಯಾ.'

ಎಂಬ ವಚನ ತತ್ವ ಸಾರದಂತೆ ನಾಡಿನ ಉದ್ದಗಲಕ್ಕೂ ಲಿಂಗಾಯತ ಮಠಗಳು, ಮಠಾಧೀಶರು ಬಸವ ತತ್ವವನ್ನೇ ಪಸರಿಸುತ್ತಾರೆ. ಬಸವ ತತ್ವದ ಮಠಗಳಿಗೆ ಇಂತದ್ದೇ ಜಾತಿ, ವರ್ಗದ ಭಕ್ತರು ಸೀಮಿತವಾಗಿದ್ದಾರೆ ಎಂದೇನಿಲ್ಲ. ಎಲ್ಲ ಜಾತಿ, ಜನಾಂಗಗಳು ವರ್ಗಬೇಧ, ಲಿಂಗ ತಾರತಮ್ಯ ಇಲ್ಲದೆ ನಡೆದುಕೊಂಡು ಹೋಗುವ ಸಂಸ್ಕೃತಿಯನ್ನು 12ನೇ ಶತಮಾನದಲ್ಲಿಯೇ ಬಸವಣ್ಣವರು ಅನುಭವ ಮಂಟಪದ ಮೂಲಕ ಶರಣರ ಅನುಭಾವದ ನುಡಿಗಳ ಮೂಲಕ ವಚನ ಕ್ರಾಂತಿಯನ್ನೇ ಸಾರಿದ್ದಾರೆ. ಇಂದಿಗೂ ಸಹ ವಚನ ಸಂದೇಶ ತತ್ವಗಳೇ ನಮ್ಮ ಬದುಕಿಗೆ ಮಾರ್ಗದರ್ಶನ ಆಗಿರುವುದರಲ್ಲಿ ಎರಡನೆಯ ಮಾತಿಲ್ಲ.

ರಾಜ್ಯದ ಲಿಂಗಾಯತ ಧರ್ಮದ ಪ್ರತಿಷ್ಠಿತ ಮಠಗಳಲ್ಲಿ ಒಂದಾದ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಶಾಖಾ ಮಠವಾದ ಶಿರೋಳದ ಶ್ರೀ ಜಗದ್ಗುರು ತೋಂಟದಾರ್ಯ ಮಠವು ತನ್ನದೇ ಆದ ವಿಶಿಷ್ಟ ಪರಂಪರೆಯನ್ನು ಹೊಂದಿದೆ. ಉತ್ತರ ಕರ್ನಾಟಕದ ಸುಪ್ರಸಿದ್ಧ 'ರೊಟ್ಟಿ ಜಾತ್ರೆ' ಎಂದೇ ನಾಡಿನ ಉದ್ದಗಲಕ್ಕೂ ಖ್ಯಾತಿ ಪಡೆದಿದೆ. ಭಾವೈಕ್ಯತೆಯನ್ನು ಸಾರುವ ರೊಟ್ಟಿ ಜಾತ್ರೆಯು ಪ್ರತಿವರ್ಷ ಬಣ್ಣದ ಹುಣ್ಣಿಮೆಯಾದ ಐದನೇ ದಿನಕ್ಕೆ ಮಹಾರಥೋತ್ಸವ ಜರುಗುವುದು. ಜಾತ್ರೆಯ ಎರಡನೇ ದಿನವೇ ಈ ರೊಟ್ಟಿ ಜಾತ್ರೆಯು ಪ್ರಾಮುಖ್ಯತೆ ಪಡೆದುಕೊಳ್ಳುತ್ತದೆ. ಶಿರೋಳ ಗ್ರಾಮದ ಪ್ರತಿ ಮನೆಗಳು ತಮ್ಮ ಮನೆಯಿಂದ ಹಾಗೂ ಸುತ್ತ ಮುತ್ತಲಿನ ಗ್ರಾಮಸ್ಥರು ತಮ್ಮ ತಮ್ಮ ಊರುಗಳಿಂದ ಶಿರೋಳದ ತೋಂಟದಾರ್ಯ ಮಠಕ್ಕೆ ಟ್ರ್ಯಾಕ್ಟರ್, ಚಕ್ಕಡಿ ಕಟ್ಟಿಕೊಂಡು ಬಂದು ರೊಟ್ಟಿಯನ್ನು ಕೊಡುತ್ತಾರೆ. ಜಾತ್ರೆಯ ಎರಡನೆಯ ದಿನವಾದ ರೊಟ್ಟಿ ಜಾತ್ರೆಯ ದಿನದಂದು ಖಡಕ್ ರೊಟ್ಟಿ, ಕರಿಹಿಂಡಿ, ಬಾಣ ಸವಿಯುತ್ತಿದ್ದರೆ, ಆಹಾ..!! ಅದರ ಸವಿಯೇ ಬೇರೆ.

ಮೊದಲನೆಯ ದಿನ, ಕೃಷಿ ಪ್ರಾತ್ಯಕ್ಷಿಕೆ, ಜಾನುವಾರು ಪ್ರದರ್ಶನ, ಮಹಾ ರಥೋತ್ಸವ ಜರುಗಲಿದ್ದು, ಎರಡನೆಯ ದಿನ, ಜಾತ್ರೆಯ ವಿಶೇಷವಾದ ರೊಟ್ಟಿ ಜಾತ್ರೆ, ರಕ್ತದಾನ ಶಿಬಿರ, ಉಚಿತ ನೇತ್ರ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ, ಮಹಾಪೂಜೆ ನಡೆಯಲಿದೆ. ಮೂರನೇ ದಿನ, ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಗ್ರಾಮ ಘಟಕದ ವತಿಯಿಂದ ವಚನ ಓದು (ಅರ್ಥ ವಿವರಣೆ) ಸ್ಪರ್ಧೆ, ಸಾಂಗ್ರಾಣಿ ಸಿಡಿ ಕಲ್ಲು ಹೊಡೆಯುವ ಸ್ಪರ್ಧೆ, ಲಘು ರಥೋತ್ಸವ ಜರುಗುವುದು.



ಈ ವರ್ಷದ ರೊಟ್ಟಿ ಜಾತ್ರೆಗೆ ಬಾಲ್ಯದಿಂದಲೂ ಶ್ರೀ ಡಾ. ತೋಂಟದ ಸಿದ್ದಲಿಂಗ ಶ್ರೀಗಳ ಭಕ್ತರಾದ, ಲಿಂಗೈಕ್ಯ ಪೂಜ್ಯ ಶ್ರೀ ಗುರುಬಸವ ಮಹಾಸ್ವಾಮಿಗಳ ಪ್ರೀತಿಯ ಭಕ್ತರಾದ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ಅಪ್ಪಟ ಬಸವ ನಿಷ್ಠರೂ ಆದ ಲಾಲಸಾಬ ಅರಗಂಜಿ ಅವರು ಜಾತ್ರಾ ಸಮಿತಿಯ ಅಧ್ಯಕ್ಷರಾಗಿ ಸರ್ವ ಧರ್ಮೀಯರ ಸಹಕಾರದೊಂದಿಗೆ ಇತ್ತೀಚೆಗೆ ಶ್ರೀ ಮಠಕ್ಕೆ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಮ.ನಿ.ಪ್ರ ಶಾಂತಲಿಂಗ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ, ಲಿಂ. ಮ.ನಿ.ಪ್ರ ಗುರುಬಸವ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ ಜಾತ್ರೆಯನ್ನು ಅತ್ಯಂತ ವಿಜೃಂಭಣೆಯಿಂದ ನಡೆಸಲು ಸಿದ್ಧತೆ ನಡೆಸಿದ್ದಾರೆ.



ಮುಂದಿನ ವರ್ಷದ ಜಾತ್ರೆಯವರೆಗೂ ಅದೇ ದಿನ ಮತ್ತೆ ಯಾವಾಗ ಬರುತ್ತೋ ಎನ್ನುವ ಕುತೂಹಲ ಎಲ್ಲರಲ್ಲೂ ಮೂಡುತ್ತದೆ. ಜಾತಿ–ಧರ್ಮವಿಲ್ಲ, ಮತ–ಪಂಥವಿಲ್ಲ. ಎಲ್ಲರೂ ಒಗ್ಗೂಡಿ ಪ್ರತಿ ಮನೆಯಿಂದ ಸಂಗ್ರಹವಾದ ರೊಟ್ಟಿ ಇಂತದ್ದೇ ಜಾತಿ, ಇಂತದ್ದೇ ಮನೆಯವರದು ಎಂದು ಯಾರಿಗೂ ಗೊತ್ತಿರುವುದಿಲ್ಲ. ಅದಕ್ಕಾಗಿಯೇ ಅದರ ಸವಿ ಇನ್ನಷ್ಟು ಹೆಚ್ಚಿರುತ್ತದೆ. ಆ ದಿನಕ್ಕಾಗಿ ವರ್ಷಪೂರ್ತಿ ಊರಿನಿಂದ ಬೇರೆ ಕಡೆ ಉದ್ಯೋಗಕ್ಕಾಗಿ, ಕೆಲಸ–ಕಾರ್ಯದ ನಿಮಿತ್ಯವಾಗಿ ಹೋದವರು ಕಾಯುತ್ತಿರುತ್ತಾರೆ. ಚಿಕ್ಕಂದಿನಿಂದ ಇಲ್ಲಿಯೇ ಬೆಳೆದು, ಎಲ್ಲೆಲ್ಲೋ ಹೋಗಿದ್ದ ಎಲ್ಲರೂ ಬಂದು ಸೇರುವ ಮಹಾ ಸಂಗಮವಾಗಿ ಮಾರ್ಪಟ್ಟಿರುತ್ತದೆ ಆ ಸುದಿನ.

ಕನ್ನಡದ ಸ್ವಾಮಿಗಳು ಎಂದೇ ಪ್ರಸಿದ್ಧಿ ಪಡೆದಿದ್ದ ಗುರುಬಸವ ಮಹಾಸ್ವಾಮಿಗಳು ಅನಾರೋಗ್ಯ ಸಮಸ್ಯೆಯಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಲಿಂಗೈಕ್ಯರಾದ ಕಾರಣದಿಂದ ಪೀಠಕ್ಕೆ ಶಾಂತಲಿಂಗ ಶ್ರೀಗಳನ್ನು ನೇಮಿಸಲಾಗಿದೆ. ಕಳೆದ ವರ್ಷದ ಜಾತ್ರೆಯಲ್ಲಿಯೇ ಗುರುಬಸವ ಮಹಾಸ್ವಾಮಿಗಳು ಈ ವರ್ಷದ ಜಾತ್ರಾ ಅಧ್ಯಕ್ಷರಾಗಿ ಲಾಲಸಾಬ ಅರಗಂಜಿ ಅವರನ್ನು ನೇಮಿಸಲು ಇಂಗಿತ ವ್ಯಕ್ತಪಡಿಸಿದ್ದು, ಅವರ ಅಭಿಲಾಷೆಯಂತೆ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ಲಾಲಸಾಬ್ ಇ ಅರಗಂಜಿ 'ನಮ್ಮೂರ ರೊಟ್ಟಿ ಜಾತ್ರೆ'ಯ ಸಾರಥಿಯಾಗಿದ್ದಾರೆ. ಉಪಾಧ್ಯಕ್ಷರು ಶರಣಪ್ಪ ಕಾಡಪ್ಪನವರ, ಕಾರ್ಯದರ್ಶಿ ವೀರಯ್ಯ ದೊಡಮನಿ, ಸಹ ಕಾರ್ಯದರ್ಶಿ ಉಮೇಶ ಮರೆಗುದ್ದಿ, ಜಾತ್ರಾ ಕಮಿಟಿಯ ನೇತೃತ್ವದಲ್ಲಿ ಜನೇವರಿ 30, 31 ಹಾಗೂ ಫೆಬ್ರುವರಿ 1ರಂದು ಜಾತ್ರೆಯು ವೈಭವೋಪೇತವಾಗಿ ನಡೆಯಲಿದೆ.

ಉತ್ತರ ಕರ್ನಾಟಕದ ಪ್ರಸಿದ್ಧ ರೊಟ್ಟಿ ಜಾತ್ರೆಗೆ ಸರ್ವರಿಗೂ ಸುಸ್ವಾಗತ, ಖಡಕ್ ರೊಟ್ಟಿ, ಕರಿಹಿಂಡಿ ಸವಿಯೋಣ, ಬಾಲ್ಯದ ನೆನಪುಗಳನ್ನು ನೆನೆಯೋಣ.

– ಪ್ರವೀಣ ಸಂಗಳದಶೆಟ್ಟರ್.

## ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ 88ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭ

# ಅರಿವಿನ ಆಚಾರ ಬದುಕಿನ ಉನ್ನತಿಗೆ ಸೋಪಾನ

**■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ**

ಧರ್ಮಾಚರಣೆ ಇಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆ, ನೆಲೆ ಸಿಗಲಾರದು. ಸತ್ಯದ ತಳಹದಿಯ ಮೇಲೆ ಸೈದ್ಧಾಂತಿಕ ನಿಲುವು ಗಟ್ಟಿಗೊಳಿಸಲು ಬಹಳಷ್ಟು ಮಹಾತ್ಮರು ಶ್ರಮಿಸಿದ್ದಾರೆ. ಅರಿವಿನ ಆಚಾರ ಬದುಕಿನ ಉನ್ನತಿಗೆ ಸೋಪಾನವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಿನ ಬುಕ್ಕಾಂಬುಧಿ ಕ್ಷೇತ್ರದಲ್ಲಿ ಶ್ರೀಮದುಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟ್ ಆಶ್ರಯದಲ್ಲಿ ಜರುಗಿದ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ 88ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಿತ್ತಿದ ಬೀಜದಂತೆ ಫಸಲು ಹೇಗೋ ಹಾಗೆ ನಮ್ಮ ಆಚರಣೆಯಂತೆ ಫಲ ಪ್ರಾಪ್ತಿ. ಮನುಷ್ಯ ಜೀವನದಲ್ಲಿ ಕರ್ತವ್ಯ, ಶಿಸ್ತು, ಶ್ರದ್ಧೆ, ಛಲ ಮತ್ತು ಸಮರ್ಪಣಾ ಮನೋಭಾವ ಬೆಳೆಸಿಕೊಳ್ಳಬೇಕು. ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವೆಂದರಿತ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಮ್ಮ ತಪೋನುಷ್ಠಾನ ಮತ್ತು ಜ್ಞಾನದ ಮೂಲಕ ಭಕ್ತರ ಬಾಳನ್ನು ಹಸನಗೊಳಿಸಿದರು ಎಂದರು.

ಸಮಾರಂಭದಲ್ಲಿ ಸಿದ್ಧರಬೆಟ್ಟ, ಬೀರೂರು, ತಾವರೆಕೆರೆ ಮೊದಲ್ಗೊಂಡು ಬಿಳಕಿ, ಮಳಲಿಮಠ, ನಂದಿಪುರ, ಹಾರನಹಳ್ಳಿ, ಕಾರ್ಜುವಳ್ಳಿ, ಹರಪನಹಳ್ಳಿ, ಸಂಗೊಳ್ಳಿ, ಚನ್ನಗಿರಿ ಪಟ್ಟಾಧ್ಯಕ್ಷರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ವಿಶೇಷ ಆಹ್ವಾನಿತರಾಗಿ ಚಿಕ್ಕಾನಂಗಲ ವಿರೂಪಾಕ್ಷಪ್ಪ, ಕೂಡ್ಲಗೆರೆ ಹಾಲೇಶ ಮೊದಲಾದ ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಳಿಂದ ಗುರುರಕ್ಷೆ ಸ್ವೀಕರಿಸಿದರು. ಮುಖ್ಯ ಅತಿಥಿಗಳಾಗಿ ಪತ್ರಕರ್ತ ಎಂ.ಸಿ. ಶಿವಾನಂದಸ್ವಾಮಿ, ಅ.ಭಾ.ವೀ.ಮಹಾಸಭಾ ಜಿಲ್ಲಾಧ್ಯಕ್ಷ ಹೆಚ್. ಎಂ. ಲೋಕೇಶ ಭಾಗವಹಿಸಿದ್ದರು.

ಡಾ. ಮಮತಾ ಸಾಲಿಮಠ ಉಪನ್ಯಾಸ ನೀಡಿದರು. ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಗುರುಮೂರ್ತಿ ಇವರಿಂದ ಸ್ವಾಗತ ಜರುಗಿತು. ಎಸ್.ತನುಜಾ ಮತ್ತು ಬಿ.ಮಹೇಶ ಕುಟುಂಬ ವರ್ಗದವರು ಅನ್ನದಾಸೋಹ ನೆರವೇರಿಸಿದರು.



ಸಮಾರಂಭ ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸಿದ್ಧಾಂತ ರಹಿತ ಜೀವನವು ದಿಕ್ಸೂಚಿ ಇಲ್ಲದ ನೌಕೆಯಂತೆ. ಮನಸ್ಸಿನಂತೆ ಮಾತು, ಮಾತಿನಂತೆ ಕೃತಿ ಇಟ್ಟುಕೊಂಡ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ವಿಚಾರ ಧಾರೆಗಳು ನಮ್ಮೆಲ್ಲರ ಬದುಕಿನ ಶ್ರೇಯಸ್ಸಿಗೆ ಸ್ಫೂರ್ತಿಯಾಗಿವೆ ಎಂದರು. ಹೊಸಹಳ್ಳಿ ಮಂಜುನಾಥ ಸಾರಥ್ಯದ ನೈಜಸುದ್ದಿ ಪತ್ರಿಕೆ ಬಿಡುಗಡೆಗೊಳಿಸಿದ ತರೀಕೆರೆ ಕ್ಷೇತ್ರದ ಶಾಸಕ ಜಿ.ಎಚ್. ಶ್ರೀನಿವಾಸ ಮಾತನಾಡಿ, ಮಹಾತ್ಮರ ಚಿಂತನಗಳು ಬದುಕಿನ ಉತ್ಕರ್ಷತೆಗೆ ಆಶಾದೀಪವಾಗಿದೆ ಎಂದರು.

## ಡಾಕ್ಟರೇಟ್ ಪದವಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಸಹ ಪ್ರಾಧ್ಯಾಪಕ ಶಿವರಾಜಕುಮಾರ ಗೌಡರ 'ಎಕ್ಸ್‌ಪೆರಿಮೆಂಟಲ್ ಸ್ಟಡಿ ಆನ್ ಇನ್‌ಕ್ಲೈನೆಡ್ ಲೋಡೆಡ್ ಬೆಲ್ಲೆಡ್ ಪೈಲ್ಸ್ ಎಂಬಿಡೆಡ್ ಇನ್ ಸ್ಯಾಂಡ್' ಎಂಬ ವಿಷಯದ ಮೇಲೆ ಮಂಡಿಸಿದ ಪ್ರಬಂಧಕ್ಕೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಡಾಕ್ಟರೇಟ್ ನೀಡಿದೆ. ಗ್ಲೋಬಲ್ ಅಕಾಡೆಮಿ ಆಫ್ ಟೆಕ್ನಾಲಜಿ ಬೆಂಗಳೂರು ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಡಾ. ಅಲ್ಲಮಪ್ರಭು ಕಮತಗಿ ಮಾರ್ಗದರ್ಶಕರಾಗಿದ್ದರು.

## ಶಿಗ್ಲಿ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ಮೈದಾನದಲ್ಲಿ ವಜ್ರಮಹೋತ್ಸವ

# ಶಿಗ್ಲಿ ಗ್ರಾಮದ ಕೀರ್ತಿ ರಾಷ್ಟ್ರಮಟ್ಟಕ್ಕೆ ಬೆಳೆದಿದೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಗ್ಲಿ ಗ್ರಾಮ ಇಂದು ಶೈಕ್ಷಣಿಕವಾಗಿ ರಾಷ್ಟ್ರಮಟ್ಟದಲ್ಲಿ ಹೆಸರು ಸಂಪಾದಿಸಿದ್ದು, ಇಲ್ಲಿನ ಅನೇಕರು ರಾಜ್ಯ, ರಾಷ್ಟ್ರಮಟ್ಟದಲ್ಲಿ ಕೀರ್ತಿ ಪಡೆದಿದ್ದಾರೆ. ಇಲ್ಲಿನ ಜನರ ಶೈಕ್ಷಣಿಕ ಪ್ರೇಮದಿಂದ ವಿದ್ಯಾವಂತರರ ನಗರವಾಗಿ, ಶಿಕ್ಷಣ ಕಾಶಿ ಎನ್ನುವ ಕೀರ್ತಿಗೆ ಪಾತ್ರವಾಗಿದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ನುಡಿದರು.

ಅವರು ಇತ್ತೀಚೆಗೆ ಸಮೀಪದ ಶಿಗ್ಲಿ ಗ್ರಾಮದ ಗ್ರಾಮ ಭಾರತಿ ಶಿಕ್ಷಣ ಸಮಿತಿ, ಎಸ್.ಎಸ್. ಕೂಡ್ಲಮಠ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಶ್ರೀಮತಿ ಜಾನಕಿಬಾಯಿ ರಜಪೂತ ಕನ್ನಡ ಪ್ರಾಥಮಿಕ ಶಾಲೆ, ಜಿ.ಬಿ.ಎಸ್. ಎಸ್ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆ, ಪುಟ್ಟಯ್ಯ ಸಂಗಯ್ಯ ಕೂಡ್ಲಮಠ ಪೂರ್ವ ಪ್ರಾಥಮಿಕ ಶಾಲೆ ಹಾಗೂ ಎಸ್. ಎಸ್. ಕೂಡ್ಲಮಠ ಮಾಧ್ಯಮಿಕ ಶಾಲೆ ಇವುಗಳ ಸಂಯುಕ್ತಾಶ್ರಯದಲ್ಲಿ ಸಂಸ್ಥೆಯ ವಜ್ರಮಹೋತ್ಸವ ಕಾರ್ಯಕ್ರಮದ ನಿಮಿತ್ಯ ಸಂಸ್ಥೆಯ ಶಿಗ್ಲಿ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ಮೈದಾನದಲ್ಲಿ ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂಸ್ಥೆಯ ಚೇರಮನ್ ಎನ್.ಸಿ. ಹುನಗುಂದ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ನಾವಿ, ಸಂಸ್ಥೆಯ ವೈ. ಚೇರಮನ್ ಸೋಮಣ್ಣ ಡಾಣಗಲ್, ಅಧ್ಯಕ್ಷ ಎಫ್.ಡಿ. ಹುನಗುಂದ, ಉಪಾಧ್ಯಕ್ಷ ಎಫ್. ಎಂ. ಕೂಡ್ಲಮಠ, ನಿರ್ದೇಶಕರಾದ ಎಸ್.ಪಿ. ಬಳಿಗಾರ, ಎಚ್.ಎಫ್. ತಳವಾರ, ಎಫ್.ಕೆ. ಕಾಳಪ್ಪನವರ, ಸಿ.ಎಂ. ರಾಗಿ, ಡಾ. ಎಸ್. ಎಂ. ಕೂಡ್ಲಮಠ, ಡಿ.ವಾಯ್. ಹುನಗುಂದ, ವೀರಣ್ಣ ಪವಾಡದ, ಸಿದ್ದಣ್ಣ ಯಲಿಗಾರ, ಸಿ.ಎಂ. ಬಾಳಿಕಾಯಿ, ಬಸಣ್ಣ ಕಳಸದ, ಬೆಳವಗಿ, ಹುಲ್ಲೂರ, ಎಸ್.ಎನ್. ಕಳ್ಳಿಹಾಳ, ಎಂ.ಎಫ್. ಹುಲಗೂರ ಮುಂತಾದವರಿದ್ದರು.

ಎಸ್‌ಎಸ್‌ಕೆ ಹೈಸ್ಕೂಲ್ ಮುಖ್ಯೋಪಾಧ್ಯಾಯ ಸಿ.ಬಿ. ಮೊಗಲಿ, ಆಂಗ್ಲ ಮಾಧ್ಯಮ ಮುಖ್ಯೋಪಾಧ್ಯಯ ಎಲ್.ಪಿ.ಲಮಾಣಿ, ಎಸ್‌ಜೆಆರ್ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಪಿ.ಸಿ. ಹಿರೇಮಠ, ವಾಯ್.ಎಂ. ಬಸಾಪೂರ, ಮಂಜುಳಾ ನಂದರಗಿ, ಎಸ್.ಎಸ್. ಲಮಾಣಿ, ಎನ್. ಎಸ್. ಹಲಗೋಡದ, ಹೆಬ್ಬಾಳ, ಎಸ್.ಎ. ಪಾಟೀಲ, ಕೆ.ಆರ್. ಲಮಾಣಿ ಹಾಗೂ ಶಾಲಾ ಶಿಕ್ಷಕರು, ಸಿಬ್ಬಂದಿಗಳು ಹಾಜರಿದ್ದರು.

ಇದೇ ಸಂದರ್ಭದಲ್ಲಿ ಎಸ್.ಎಂ. ಮುಳಗುಂದ, ಎನ್.ವಾಯ್. ಹೊಸಮನಿ, ಸದಾಶಿವ ಬಾಳಿಕಾಯಿ ಹಾಗೂ ಸಂಸ್ಥೆಯ ಮಾಜಿ, ಹಾಲಿ ಪದಾಧಿಕಾರಿಗಳು, ಹಾಗೂ ನಿವೃತ್ತ ಶಿಕ್ಷಕರು ಸಿಬ್ಬಂದಿಗಳು, ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಸಿಬ್ಬಂದಿಗಳ ಮತ್ತು ಅನೇಕ ಮಹನೀಯರನ್ನು ಸನ್ಮಾನಿಸಲಾಯಿತು.



ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಶಂಭು ಬಳಿಗಾರ ಮಾತನಾಡಿ, ಶಿಗ್ಲಿ ಗ್ರಾಮ ನನ್ನ ತವರೂರು ಎಂದು ಹೇಳಿಕೊಳ್ಳಲು ಹೆಮ್ಮೆ ಎನಿಸುತ್ತದೆ. ಮಕ್ಕಳಿಗೆ ಎಳವೆಯಿಂದಲೇ ಶಿಸ್ತು, ಪ್ರಾಮಾಣಿಕತೆ, ಪರಿಶ್ರಮದ ಬಗ್ಗೆ ಸರಿಯಾಗಿ ತಿಳುವಳಿಕೆ ನೀಡಿ ಬೆಳೆಸಬೇಕು. ಉತ್ತಮ ಸಾಧನೆಗೆ ಹಿರಿಯರ ಆಶೀರ್ವಾದದ ಜೊತೆ ಸಂಸ್ಕಾರವೂ ಅವಶ್ಯ ಎಂದರು.

## ಇಂದಿನ ನೀರು ಪೂರೈಕೆ ವಿವರ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಜನವರಿ 30ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 15, 17 ಜವಳಗಲ್ಲಿ, ಡಿ ಸಿ ಮಿಲ್ ರೋಡ್, ಮಹೇಂದ್ರಕರ್ ಸರ್ಕಲ್ ರೋಡ್, ಗಾಂಧಿ ಸರ್ಕಲ್ ರೋಡ್, ಶಹಾಪೂರ ಪೇಟೆ, ಮೀನಿನ ಮಾರ್ಕೆಟ್, ಬಸವೇಶ್ವರ ಗುಡಿ ಲೈನ್.

ವಾರ್ಡ್ ನಂ. 34 ಅಬ್ಬಿಗೇರಿ ಲೇಔಟ್, ಇಂಡೋರ್ ಸ್ಟೇಡಿಯಂ, ನಂದೀಶ್ವರ ನಗರ. ವಾರ್ಡ್ ನಂ. 35 ಪತ್ತಾರ್ ಸರ ಲೈನ್, ಲಕ್ಷ್ಮಣಸಾ ನಗರ, ಬಾಲಾಜಿ ನಗರ, ದೇವರಾಜ ಹಾಸ್ಟೆಲ್ ಲೈನ್, ಬಸಪ್ಪ ಲೇಔಟ್, 9 ನಂ ಶಾಲೆ ಆದರ್ಶ ನಗರ, ಇಮಾಮ್ ಹುಸೇನ್ ಕಾಲೋನಿ.

ವಾರ್ಡ್ ನಂ 33 ಕೇಶವ ನಗರ, ಮುಳಗುಂದ ನಾಕಾ, ಬ್ಯಾಂಕರ್ಸ್ ಕಾಲೋನಿ. ವಾರ್ಡ್ ನಂ. 22 ಅಹಮದರ್ ಲೈನ್ 6 ಭಾಗಗಳು ದೊಡ್ಡಮಸೂತಿ ಭಾಗ. ವಾರ್ಡ್ ನಂ 6 ರೊಟ್ಟಿಯವರ ಲೈನ್, ರೆಡ್ಡಿಯವರ ಲೈನ್, ನಾವಳ್ಳಿಯವರ ಲೈನ್, ಸಿದ್ದಲಿಂಗನಗರ, ಪಿಪಿಗುಡಿ ಹಿಂದಿನ ಭಾಗ.

ವಾರ್ಡ್ ನಂ. 5 ಇಂಡಸ್ಟ್ರಿಯಲ್, ನೇಕಾರ ಕಾಲೋನಿ, ರಂಗಾವಧೂತ ನಗರ 1ನೇ ಬ್ಯಾಚ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಮಗಾರಿ ಪೂರ್ಣಗೊಳಿಸಲು ಸೂಕ್ತ ಕ್ರಮ

▶▶ ಮೊದಲನೇ ಪುಟದಿಂದ

ಅಲ್ಲದೇ ಮುಂದಿನ ಒಂದು ತಿಂಗಳೊಳಗಾಗಿ ಈ ಎಲ್ಲ ಕಾಮಗಾರಿಗಳನ್ನು ಆರಂಭಿಸಿ ಪೂರ್ಣಗೊಳಿಸಬೇಕು ಎಂದು ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಸಚಿವ ಎಚ್.ಕೆ. ಪಾಟೀಲ ನಿರ್ದೇಶನ ನೀಡಿದರು.

ಗದಗ-ಬೆಟಗೇರಿ ನಗರಸಭೆ ಸದಸ್ಯ ಎಲ್.ಡಿ. ಚಂದಾವರಿ ಮಾತನಾಡಿ, ಇಂದು ಆರಂಭವಾದ ಕಾಮಗಾರಿ ಪೂರ್ಣಗೊಂಡರೆ ರಿಂಗ್ ರೋಡ್ ಕಾಮಗಾರಿ ಶೇ. 75ರಷ್ಟು ಪ್ರಗತಿ ಸಾಧಿಸಿದಂತಾಗುತ್ತದೆ. ಇದರಿಂದ ನಗರದ ಸಂಚಾರ ದಟ್ಟಣೆ ಖಂಡಿತವಾಗಿಯೂ ಕಡಿಮೆಯಾಗಲಿದೆ ಎನ್ನುವ ವಿಶ್ವಾಸ ವ್ಯಕ್ತಪಡಿಸಿದರು.

ನಗರಸಭೆ ಸದಸ್ಯ ಬಿ.ಬಿ. ಅಸೂಟಿ ಮಾತನಾಡಿ, ಈ ಹಿಂದೆ ಎಚ್.ಕೆ. ಪಾಟೀಲ ಅವರು ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದ ಸಂದರ್ಭದಲ್ಲಿ ಜಿಲ್ಲೆಗೆ ಅಪಾರ ಅನುದಾನ ತರುವ ಮೂಲಕ ಅಭಿವೃದ್ಧಿ ಮಾಡಿದ್ದಾರೆ. ಅವರು ಅಭಿವೃದ್ಧಿ ಕಲ್ಪನೆಯೂ ಅಪಾರವಾಗಿದೆ. ರಿಂಗ್ ರಸ್ತೆ ಪೂರ್ಣವಾದಲ್ಲಿ, ರೋಣ, ಗಜೇಂದ್ರಗಡದಿಂದ ಆಗಮಿಸುವ ವಾಹನಗಳು ನಗರದ ಹೊರಗಿನಿಂದಲೇ ಸಾಗುವ ಮೂಲಕ ಸಂಚಾರ ದಟ್ಟಣೆ ನಿಯಂತ್ರಣವಾಗಲಿದೆ ಎಂದು ತಿಳಿಸಿದರು.

ನವೆಂಬರ್ 1ರಿಂದ 3ರವರೆಗೆ ಕರ್ನಾಟಕ ಸಂಭ್ರಮ-50 ಉತ್ತಮ ಕಾರ್ಯಕ್ರಮ ಮಾಡಿ, ಐತಿಹಾಸಿಕ ಸಂಭ್ರಮಕ್ಕೆ ಕಾರಣರಾದವರು ಎಚ್.ಕೆ. ಪಾಟೀಲರು. ಕರ್ನಾಟಕ ಸಂಭ್ರಮದಿಂದಾಗಿ 50 ವರ್ಷದ ಹಿಂದಿನ ಗತ ವೈಭವದ ಮರುಸೃಷ್ಟಿಯನ್ನು ನಾವೆಲ್ಲ ಅನುಭವಿಸುವಂತಾಯಿತು ಎಂದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಬಿ.ಎಸ್. ತಳವಾರ, ಕರಿಸೋಮನಗೌಡ್ರ, ರೋಣದ ಅಜ್ಜಣ್ಣ ಪಾಟೀಲ, ಶರಣು, ಯರನಾಳ, ಅಶೋಕ ಮಂದಾಲಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### 2024-25ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಕನಕಪ್ಪ ಅರಳಿಗಿಡದ

## ಮೂಲ ಸೌಲಭ್ಯಗಳನ್ನೊದಗಿಸಲು ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಅಭಿವೃದ್ಧಿಗಾಗಿ ಸದಸ್ಯರು ನೀಡಿರುವ ಸಲಹೆ-ಸೂಚನೆಗಳನ್ನು ಸ್ವಾಗತಿಸಿದ್ದು, ಬಜೆಟ್‌ನಲ್ಲಿ ಅಭಿವೃದ್ಧಿ ಕಾಮಗಾರಿಗಳ ಜತೆಗೆ ಮೂಲಸೌಲಭ್ಯಗಳನ್ನು ಒದಗಿಸಲು ಆದ್ಯತೆ ನೀಡಲಾಗುವುದು ಎಂದು ಪುರಸಭೆ ಸ್ಥಾಯಿ ಸಮಿತಿ ಚೇರಮನ್ ಕನಕಪ್ಪ ಅರಳಿಗಿಡದ ಹೇಳಿದರು.

ಇಲ್ಲಿನ ಪುರಸಭೆ ಸಭಾ ಭವನದಲ್ಲಿ ಸೋಮವಾರ ನಡೆದ 2024-25ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಪಟ್ಟಣದ ಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಬಜೆಟ್ ಪೂರ್ವಭಾವಿ ಸಭೆ ನಡೆಸುತ್ತಿದ್ದು, ಪುರಸಭೆ ಸದಸ್ಯರು ಹಾಗೂ ಸಾರ್ವಜನಿಕರು ತಮ್ಮ ಸಲಹೆ-ಸೂಚನೆಗಳನ್ನು ನೀಡಬೇಕು ಎಂದು ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ತಿಳಿಸಿದರು. ಸದಸ್ಯ ಶಿವರಾಜ ಘೋರ್ಪಡೆ ಮಾತನಾಡಿ, ಪಟ್ಟಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಇದ್ದೂ ಇಲ್ಲದಂತಾಗಿವೆ. ಹೀಗಾಗಿ ನೀರಿನ ಘಟಕಗಳ ನಿರ್ವಹಣೆಯೊಂದಿಗೆ ಪ್ರತ್ಯೇಕ ಕೊಳವೆ ಬಾವಿಗಳನ್ನು ಕಾಯ್ದಿರಿಸಬೇಕು. ಇಲ್ಲದಿದ್ದರೆ ಘಟಕಗಳ ನಿರ್ಮಾಣಕ್ಕೆ




ಮಾಡಿದ ಹಣ ವ್ಯರ್ಥವಾಗುತ್ತದೆ. ಪಟ್ಟಣದಲ್ಲಿನ ಉದ್ಯಾನವನದ ನಿರ್ವಹಣೆ, ಹೊಸ ಆಟಿಕೆ ಸಾಮಾಗ್ರಿ ಖರೀದಿಗೆ ಬಜೆಟ್‌ನಲ್ಲಿ ಹಣವಿಡಿ ಎಂದರು.

ಪುರಸಭೆಯಿಂದ ನಿವೇಶನ ಪಡೆದು ರಾಮಾಪೂರ ಗ್ರಾಮದ ಬಳಿ ಮನೆಗಳನ್ನು ನಿರ್ಮಿಸಿಕೊಳ್ಳುವ ಜನರಿಗೆ ನೀರಿನ ಸಮಸ್ಯೆ ಆಗುತ್ತಿದೆ. ಹೀಗಾಗಿ ಅಲ್ಲಿ ಕೊಳವೆಬಾವಿ ಕೊರೆಯಿಸುವುದರ ಜತೆಗೆ ಪಟ್ಟಣದ 4 ದಿಕ್ಕುಗಳಲ್ಲಿ ಸ್ವಾಗತ ಫಲಕಗಳನ್ನು ನಿರ್ಮಿಸಿ ಎಂದ ಪುರಸಭೆ ಸದಸ್ಯ ಸುಭಾಸ ಮ್ಯಾಗೇರಿ ಅವರು, ಉಪನೋಂದಣಾಧಿಕಾರಿ ಕಚೇರಿಯಿಂದ ಪುರಸಭೆಗೆ ಬರಬೇಕಾದ ಲಕ್ಷಾಂತರ ಸೆಸ್ ಹಣ ಹಾಗೆಯೇ ಇದೆ. ಒಂದು ಸಣ್ಣ ಕೆಲಸ ಹೇಳಿದರೆ ಅಧಿಕಾರಿಗಳು ಹಣ ಇಲ್ಲ ಎನ್ನುತ್ತೀರಿ. ಅಲ್ಲಿರುವ ಸೆಸ್ ಹಣವನ್ನು ತರುವ ಕೆಲಸಕ್ಕೆ ಮೊದಲು ಮುಂದಾಗಿ ಎಂದರು.

ಪಟ್ಟಣದಲ್ಲಿ ಮಹಿಳಾ ಸುಲಭ ಶೌಚಾಲಯಗಳ ನಿರ್ವಹಣೆ ಇಲ್ಲದ ಪರಿಣಾಮ ಬಯಲಲ್ಲಿ ಶೌಚಕ್ಕೆ ಹೋಗುವುದು ಇನ್ನೂ ಜೀವಂತವಾಗಿದೆ. ಹೀಗಾಗಿ ಶೌಚಾಲಯಗಳನ್ನು ಸುಸ್ಥಿತಿಯಲ್ಲಿಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಅನುದಾನ ಮೀಸಲಿಡಿ ಎಂದು ರಾಜು ಸಾಂಗ್ಲೀಕರ ನೀಡಿದ ಸಲಹೆಗೆ ಸದಸ್ಯರಾದ ಲೀಲಾ ಸವಣೂರು, ಮುದಿಯಪ್ಪ ಮುಧೋಳ ಹಾಗೂ ವೆಂಕಟೇಶ ಮುದಗಲ್ ಧ್ವನಿಗೂಡಿಸಿದರು.

ಈ ವೇಳೆ ದೀಪಾ ಗೌಡರ, ದ್ರಾಕ್ಷಾಯಿಣಿ ಚೊಳಿನ, ಲಕ್ಷ್ಮೀ ಮುಧೋಳ, ವಿಜಯಾ ಮಳಗಿ, ಶರಣಪ್ಪ ಉಪ್ಪಿನಬೆಟಗೇರಿ, ಯು.ಆರ್. ಚನ್ನಮ್ಮನವರ, ಶ್ರೀಧರ ಬಿದರಳ್ಳಿ, ಗುಲಾಂನಬಿ ಆಜಾದ ಹುನಗುಂದ, ಅಧಿಕಾರಿಗಳಾದ ಮಲ್ಲಿಕಾರ್ಜುನಯ್ಯ, ಜಿ.ಎನ್. ಕಾಳೆ, ಸಿ.ಡಿ. ದೊಡ್ಡಮನಿ, ಶಿವಕುಮಾರ ಇಲಾಳ, ಗುರಪ್ಪ ಪಟ್ಟಣಶೆಟ್ಟಿ ಮುಂತಾದವರಿದ್ದರು.

ಪುರಸಭೆ ಆವರಣದಲ್ಲಿನ ವಿಶೇಷ ತಹಸೀಲ್ದಾರ್ ಕಚೇರಿಯ ಸುತ್ತಮುತ್ತ ಗಬ್ಬೆದ್ದು ನಾರುತ್ತಿದೆ. ಅದನ್ನು ಮೊದಲು ವಶಕ್ಕೆ ಪಡೆಯುವುದರ ಜತೆಗೆ ಅಲ್ಲೊಂದು ಕಚೇರಿಯನ್ನು ಆರಂಭಿಸಿ. ಪಟ್ಟಣದಲ್ಲಿ ಸ್ವಿಮಿಂಗ್ ಫೂಲ್ ನಿರ್ಮಾಣ, ತರಕಾರಿ ಮಾರುಕಟ್ಟೆಯಲ್ಲಿ ಶೌಚಾಲಯ ನಿರ್ಮಾಣ, ಪತ್ರಿಕಾ ಭವನ ನಿರ್ಮಿಸಲು ನಿವೇಶನವನ್ನು ಕಾಯ್ದಿರಿಸಿ, ಸೋಲಾರ್ ಬೀದಿ ದೀಪಗಳ ಅಳವಡಿಕೆ ಸೇರಿ ಅನೇಕ ಸಲಹೆ ಸೂಚನೆಗಳನ್ನು ಬಂದವು.

## ಇತಿಹಾಸದ ಬಗ್ಗೆ ಅಧ್ಯಯನ ಅಗತ್ಯ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಮ್ಮ ಪರಂಪರೆಯನ್ನು ಅರಿಯಲು ಇತಿಹಾಸ ಓದುವ ಅಗತ್ಯವಿದೆ ಎಂದು ಇತಿಹಾಸ ಉಪನ್ಯಾಸಕ ಕೆ.ಎಂ. ಶಿರೂರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜು ವಿದ್ಯಾರ್ಥಿಗಳಿಗೆ ಮುಳಗುಂದ ಪಟ್ಟಣದ ಐತಿಹಾಸಿಕ ದೇವಾಲಯಗಳಾದ ಸಿದ್ದೇಶ್ವರ ದೇವಾಲಯ, ಚಂದ್ರನಾಥ ಬಸದಿ, ಪಾರ್ಶ್ವನಾಥ ಬಸದಿ, ಸ್ವಯಂಬೂದೀಶ್ವರ ದೇವಾಲಯ, ನಗರೇಶ್ವರ ದೇವಾಲಯಗಳ ಕ್ಷೇತ್ರ ಕಾರ್ಯ ಅಧ್ಯಯನದಲ್ಲಿ ಮಾತನಾಡಿ, ಮುಳಗುಂದ ಪಟ್ಟಣವೂ ಶೈವ, ಜೈನ, ವೈಷ್ಣವ, ಧರ್ಮದ ಕೇಂದ್ರವಾಗಿದ್ದು ಬಹು ಪ್ರಾಚೀನ ಕಾಲದಿಂದ ತನ್ನದೇ ಆದ ಸಂಸ್ಕೃತಿ, ಪರಂಪರೆ, ಐತಿಹಾಸಿಕ ಗುರುತನ್ನು ಹೊಂದಿದೆ. ಇತಿಹಾಸದ ಬಗ್ಗೆ ಪ್ರತಿಯೊಬ್ಬರೂ ಅಧ್ಯಯನ ಮಾಡಬೇಕು ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಎನ್.ಕೆ. ಕಡೆಮನಿ, ಪಿ.ಎಚ್. ಬಾರಕೇರ, ವಿನಾಯಕ ಶಿರಬಡಗಿ, ರಮೇಶ ಮಂತ್ರೋಡಿ, ಮಹಾವಿದ್ಯಾಲಯದ ಬೋಧಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ಕ್ರೀಡೆಯಿಂದ ದೈಹಿಕ, ಮಾನಸಿಕ ದೃಢತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಗದಗ ಜಿಲ್ಲಾ ಘಟಕದಿಂದ 'ಪ್ರಜಾರಾಜ್ಯೋತ್ಸವ ಹೆಲ್ತ್ ಕಪ್' ಕ್ರಿಕೆಟ್ ಆಯೋಜಿಸಿದೆ. ನೌಕರರು ದೈಹಿಕ, ಮಾನಸಿಕವಾಗಿ ಸದೃಢಗೊಂಡು ತಮ್ಮ ನಿತ್ಯ ಜೀವನ ಮತ್ತು ಕೆಲಸ ಕಾರ್ಯಗಳನ್ನು ನಿಭಾಯಿಸಲು ಕ್ರೀಡೆ ಸಹಕಾರಿಯಾಗಿದೆ ಎಂದು ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು.

ಅವರು ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಘಟಕದಿಂದ 2024 ಹಮ್ಮಿಕೊಂಡಿದ್ದ ಕ್ರಿಕೆಟ್ ಟೂರ್ನಾಮೆಂಟ್‌ನ ಸೀಸನ್-2ರ



ಬಹುಮಾನ ವಿತರಣೆ ಹಾಗೂ ಸಮಾರೋಪ ಸಮಾರಂಭದಲ್ಲಿ ಬಹುಮಾನ ವಿತರಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಸಿದ್ದಪ್ಪ ಎನ್.ಲಿಂಗದಾಳ ಮಾತನಾಡಿ, ಕ್ರಿಕೆಟ್ ಲೀಗ್ ಟೂರ್ನಾಮೆಂಟ್‌ಗೆ ಇಲಾಖೆಯ ಮುಖ್ಯಸ್ಥರು ಪ್ರೋತ್ಸಾಹ ನೀಡಿರುವುದರಿಂದ ಈ ಟೂರ್ನಾಮೆಂಟ್ ಯಶಸ್ಸು ಕಾಣಲು ಸಾಧ್ಯವಾಗಿದೆ ಎಂದರು.

ನರಗುಂದ ತಾಲೂಕಾ ಆರೋಗ್ಯಾಧಿಕಾರಿ ಡಾ.ರೇಣುಕಾ ಕೊರವನ್ನವರ ಮಾತನಾಡಿ, ಕ್ರೀಡೆಗಳು ಪ್ರತಿಯೊಬ್ಬರ ಜೀವನದಲ್ಲಿ ಸಾಧನೆಗೆ ಮೈಲುಗಲ್ಲಾಗಿ ನಿಲ್ಲುತ್ತದೆ. ನರಗುಂದ ತಂಡವು ಮುಂದಿನ ವರ್ಷ ಪ್ರಥಮ ಸ್ಥಾನವನ್ನು ಪಡೆಯಲು ಪ್ರೋತ್ಸಾಹ ನೀಡುವುದಾಗಿ ಹೇಳಿದರು.

ಪ್ರಮುಖರಾದ ಎಲ್.ನಾರಾಯಣಸ್ವಾಮಿ, ಮಹಾವೀರ ಜೈನ್, ಡಾ. ವೆಂಕಟೇಶ್ ರಾಠೋಡ್, ಡಾ. ಬಿ.ಎಸ್. ಭಜಂತ್ರಿ, ಅಜಯ್ ಕುಮಾರ್ ಕಲಾಲ್, ಮಲ್ಲಿಕಾರ್ಜುನ್ ಕಲಕಂಬಿ, ಪತ್ರಕರ್ತ ದೇವಪ್ಪ ಲಿಂಗದಾಳ, ಬಿ.ಸಿ. ಹಿರೇಹಾಳ, ಏಕನಾಥಗೌಡ ಪಾಟೀಲ, ಕೆ.ವಿ. ಬಡಿಗೇರ, ವಾಯ್.ಎನ್. ಕಡೆಮನಿ, ಸಿಹೆಚ್ಓ ಚಂದ್ರು ಪೂಜಾರ, ಶಿವು ಕರಡಿ, ಪ್ರಭು ಹೊನಗುಡಿ, ಚಿದಾನಂದ ಕುಂಬಾರ, ವಿಜಯಲಕ್ಷ್ಮಿ ಚಲವಾದಿ, ಶಾಮುಲ್ ಕರಡಿಗುಡ್ಡ, ಬಸವರಾಜ್ ಸೋಮಗೊಂಡ, ಯಲ್ಲಪ್ಪ ಹಗೇದಾಳ ಉಪಸ್ಥಿತರಿದ್ದರು.

## ವೀರೇಶ್ವರ ಪುಣ್ಯಾಶ್ರಮ ಅಂಧರ ಬಾಳಿಗೆ ಬೆಳಕು

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವೀರೇಶ್ವರ ಪುಣ್ಯಾಶ್ರಮ ನಾಡಿನ ಅಂಧ, ಅನಾಥ, ವಿಕಲಚೇತನ ಮಕ್ಕಳಿಗೆ ಅನ್ನದಾಸೋಹ, ಸಂಗೀತ-ಜ್ಞಾನ ದಾಸೋಹ ನೀಡುವ ಮೂಲಕ ಅವರಲ್ಲಿ ಚೈತನ್ಯ ತುಂಬಿ ಸ್ವಾವಲಂಬಿ ಬದುಕು ರೂಪಿಸಿದ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ವೀರೇಶ್ವರ ಪುಣ್ಯಾಶ್ರಮ ಪೀಠಾಧಿಪತಿ ಡಾ.ಕಲ್ಲಯ್ಯಜ್ಜನವರು ಅಭಿಪ್ರಾಯಪಟ್ಟರು.

ನಗರದ ವೀರೇಶ್ವರ ಪುಣ್ಯಾಶ್ರಮದ ಶ್ರೀಗುರು ಪುಟ್ಟರಾಜ ಕಲಾಭವನದಲ್ಲಿ ಗಾನಯೋಗಿ ಡಾ.ಪಂ.ಪುಟ್ಟರಾಜ ಸೇವಾ ಸಮಿತಿ ಗದಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಾಂಸ್ಕೃತಿಕ ಕಲಾತಂಡಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಸುಗಮ ಸಂಗೀತ-ಜಾನಪದ ಸಂಗೀತ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕ ಹೇಮರಾಜ ಶಾಸ್ತ್ರಿ



ಹೆಡಿಗ್ಗೊಂಡ, ಗಾನಯೋಗಿ ಡಾ.ಪಂ.ಪುಟ್ಟರಾಜ ಸೇವಾ ಸಮಿತಿಯ ಅಧ್ಯಕ್ಷ ಸಿದ್ಧೇಶ್ವರ ಶಾಸ್ತ್ರಿ ತೆಲ್ಲೂರ, ಸಮಿತಿಯ ಸದಸ್ಯರಾದ ಎಂ.ಜಿ. ಗುರುಸಿದ್ಧೇಶ್ವರ ಶಾಸ್ತ್ರಿ ಬೇವೂರ, ಶರಣಯ್ಯ ಶಾಸ್ತ್ರಿ ಅಗಸಬಾಳ, ಸಂಗಮೇಶ ಕರಡಕಲ್ ಸಂದರ್ಭೋಚಿತವಾಗಿ ಮಾತನಾಡಿದರು.

ಬೆಟದಯ್ಯ ಶಾಸ್ತ್ರಿ ಹಿರೇಮ್ಯಾಗೇರಿ, ವೀರೇಶ ಗವಾಯಿ ಹಿರೇಮಠ, ಬಸವಲಿಂಗಯ್ಯ ಹಿರೇಮಠ, ವೀರಭದ್ರಪ್ಪ ಬೆಣಕಲ್ ತಂಡದಿಂದ ಜಾನಪದ ಹಾಗೂ ಸುಗಮ ಸಂಗೀತ ಜರುಗಿತು. ಶರಣಬಸವ ಶಾಸ್ತ್ರಿ ಇಲಕಲ್ಲ ನಿರೂಪಿಸಿ ವಂದಿಸಿದರು.

## ಇಂದು ಡಬಲ್ ಡೆಕ್ಕರ್ ಅಂಬಾರಿ ಬಸ್‌ಗೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ


ಗದಗ ನಗರದಲ್ಲಿ ಸಂಚಾರ ಮಾಡಲು ಡಬಲ್ ಡೆಕ್ಕರ್ ಅಂಬಾರಿ ಬಸ್‌ಗೆ ರಾಜ್ಯ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನಗಳ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಜ. 30 ರಂದು ಬೆಳಿಗ್ಗೆ 9.15 ಗಂಟೆಗೆ ಚಾಲನೆ ನೀಡಲಿದ್ದಾರೆ.

ಸದರಿ ಬಸ್‌ನ ಟಿಕೆಟ್ ದರ ವಿದ್ಯಾರ್ಥಿಗಳಿಗೆ ರೂ.100 ಹಾಗೂ ಸಾರ್ವಜನಿಕರಿಗೆ ರೂ.120 ಇರುತ್ತದೆ. ಅಂಬಾರಿ ಬಸ್‌ನ ಸಮಯ ಬೆಳಿಗ್ಗೆ 9.30 ರಂದ ಸಂಜೆ 6 ಗಂಟೆಯವರೆಗೆ ಇರುತ್ತದೆ. ಅಂಬಾರಿ ವಾಹನ ಚಲಿಸುವ ಮಾರ್ಗ ಹೊಸ ಬಸ್ ನಿಲ್ದಾಣದಿಂದ - ಬಸವೇಶ್ವರ ಮೂರ್ತಿ ಪುತ್ಥಳಿ ಮ್ಯೂಸಿಯಂ - ಭೀಷ್ಮ ಕೆರೆಯ ಬೋಟಿಂಗ್ - ಹೊಸ ಜಿಲ್ಲಾಧಿಕಾರಗಳ ಕಚೇರಿ- ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯ ಅಥವಾ ಸಾಲುಮರದ ತಿಮ್ಮಕ್ಕ ಪಾರ್ಕ್- ಮರಳಿ ಅದೇ ಮಾರ್ಗವಾಗಿ ಹೊಸ ಬಸ್ ನಿಲ್ದಾಣಕ್ಕೆ ಬಂದು ಸೇರುತ್ತದೆ.

ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ಪ್ರವಾಸಿಗರು ವಾಹನದ ಸದುಪಯೋಗ ಪಡೆಯಲು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

## ನಾಗನಗೌಡ ಕಂದಕೂರು ಅಗಲಿಕೆಗೆ ರಂಭಾಪುರಿ ಶ್ರೀಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು



ರೈತರ ಧ್ವನಿಯಾಗಿ, ಕೆರೆ ತುಂಬಿಸುವ ಯೋಜನೆಗೆ ಸದಾ ಬೆನ್ನೆಲುಬಾಗಿ ನಿಂತಿದ್ದ ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಾಗನಗೌಡ ಕಂದಕೂರು(73) ಇವರ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ನಾಗನಗೌಡ ಕಂದಕೂರು ಅವರು ಜನ ಸೇವೆಯೇ ಜನಾರ್ಧನ ಸೇವೆ ಎನ್ನುವ ತತ್ವದಡಿ ರಾಜಕೀಯ ಕ್ಷೇತ್ರದಲ್ಲಿ ಹೆಸರು ಮಾಡಿದ ಹಿರಿಯ ರಾಜಕಾರಣಿಯಾಗಿದ್ದರು. ಗಿರಿನಾಡಿನಲ್ಲಿ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ ಮುತ್ಸದ್ದಿ ನಾಯಕರಾಗಿದ್ದ ಅವರು, ಭಾವನಾ ಜೀವಿಗಳಾಗಿದ್ದರು. ಧರ್ಮ-ಸಂಸ್ಕೃತಿಯ ಬಗ್ಗೆ ಅಪಾರ ನಂಬಿಕೆ ಹೊಂದಿದವರಾಗಿದ್ದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದ್ದರು. ಸರ್ವ ಜನರ ಹಿತ ಚಿಂತಕರಾಗಿದ್ದ ಅವರ ಆತ್ಮಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಚಿರಶಾಂತಿ ಅನುಗ್ರಹಿಸಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ನೀಡಲಿ ಎಂದು ತಮ್ಮ ಸಂತಾಪ ಸಂದೇಶದಲ್ಲಿ ರಂಭಾಪುರಿ ಶ್ರೀಗಳು ತಿಳಿಸಿದ್ದಾರೆ.

## ನಾಡಿನ ಸಾಂಸ್ಕೃತಿಕ ಪರಂಪರೆ ಉಳಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಲೆ, ಸಾಹಿತ್ಯ, ಸಂಗೀತ, ನೃತ್ಯ ನಮ್ಮ ನಾಡಿನ ಸಾಂಸ್ಕೃತಿಕ ಪರಂಪರೆಯ ಶ್ರೀಮಂತಿಕೆಗೆ ಸಾಕ್ಷಿಯಾಗಿದೆ. ಮೊಬೈಲ್, ಟಿವಿ ಹಾವಳಿಯ ನಡುವೆಯೂ ಇವುಗಳನ್ನು ಜೀವಂತವಾಗಿರಿಸುವ ಗುರುತರ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹಿರಿಯ ಧಾರ್ಮಿಕ ಚಿಂತಕರಾದ ಮಂಗಳಾದೇವಿ ಮಹಾಂತಶೆಟ್ಟರ ಹೇಳಿದರು.

ಅವರು ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಸೋಮೇಶ್ವರ ಭಕ್ತರ ಸೇವಾ ಸಮಿತಿಯಿಂದ ಹಮ್ಮಿಕೊಂಡ ಉಪನ್ಯಾಸ, ಸಂಗೀತ-ನೃತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇವಸ್ಥಾನಗಳಲ್ಲಿ ರಾಜ-ಮಹಾರಾಜರ ಕಾಲದಿಂದಲೂ ಸಾಂಸ್ಕೃತಿಕ ಕಲೆ, ಸಂಗೀತ, ಪರಂಪರೆಯನ್ನು ಉಳಿಸಿ-ಬೆಳೆಸುವ ಕಾರ್ಯ ಮಾಡುತ್ತಾ ಬರಲಾಗಿದೆ. ಈ ಹಿನ್ನೆಲೆಯಲ್ಲಿ ಪಟ್ಟಣದ ಐತಿಹಾಸಿಕ ದೇವಸ್ಥಾನದಲ್ಲಿ



ಸೋಮೇಶ್ವರ ಭಕ್ತರ ಸೇವಾ ಸಮಿತಿಯಿಂದ ನಿರಂತರವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸುತ್ತಾ ಬರುತ್ತಿರುವುದು ಶ್ಲಾಘನೀಯ ಎಂದರು.


ಅತಿಥಿಗಳಾಗಿ ಆಗಮಿಸಿದ್ದ ಅಗಡಿ ಸನ್‌ರೈಸ್ ಆಸ್ಪತ್ರೆಯ ಡಾ. ಸುಜಾತಾ ಸಂಗೂರ ಮಾತನಾಡಿ, ಮಹಿಳೆಯರು ವೈಜ್ಞಾನಿಕ ಯುಗದಲ್ಲಿಯೂ ಸಂಘಟಿತರಾಗಿ ಸಾಂಸ್ಕೃತಿಕ, ಸಾಮಾಜಿಕ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ನಮ್ಮ ನಾಡಿನ ಸಾಂಸ್ಕೃತಿಕ ಹಿರಿಮೆಯನ್ನು ಮುಂದಿನ ಜನಾಂಗಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ತಾಯಂದಿರ ಪಾತ್ರ ಮಹತ್ವದ್ದಾಗಿದೆ ಎಂದರು.

ಸಾಹಿತಿ ಮೈತ್ರಾದೇವಿ ಹಿರೇಮಠ ಬನಶಂಕರಿ ದೇವಿ ಮಹಾತ್ಮೆ ಕುರಿತು ಉಪನ್ಯಾಸ ನೀಡಿದರು. ಮಹಿಳೆಯರಿಂದ ನಡೆದ ನೃತ್ಯ ಸಂಗೀತೋತ್ಸವ ಎಲ್ಲರ ಮನ ಸೆಳೆಯಿತು. ಮಾಲಾದೇವಿ ದಂಧರಗಿ, ಸರೋಜಾ ಬನ್ನೂರ, ಶುಭಾ ಕುಲಕರ್ಣಿ, ಸುರೇಶ ರಾಚನಾಯ್ಕರ, ಬಸವರಾಜ ಮೆಣಸಿನಕಾಯಿ, ರಾಧಿಕಾ ಕುಲಕರ್ಣಿ, ಶಾರದಾ ಮಹಾಂತಶೆಟ್ಟರ, ಶೈಲಾ ಆದಿ, ಗೀತಾದೇವಿ ಮಾನ್ವಿ, ರಾಘವೇಂದ್ರ ಪೂಜಾರ ಮುಂತಾದವರಿದ್ದರು.

## ಸಿದ್ದೇಶ್ವರಶಾಸ್ತ್ರಿ ತೆಲ್ಲೂರರಿಗೆ 'ಕುಮಾರವ್ಯಾಸ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ



ಕಥಾ ಕೀರ್ತನೆ ಕ್ಷೇತ್ರದಲ್ಲಿ ಸುದೀರ್ಘ ಸೇವೆ ಹಾಗೂ ಅನನ್ಯ ಕೊಡುಗೆ ನೀಡಿರುವ ಹಿರಿಯ ಕಲಾವಿದರಿಗೆ ಕರ್ನಾಟಕ ರಾಜ್ಯ ಸರಕಾರವು ನೀಡುವ ಅತ್ಯುನ್ನತ 'ಕುಮಾರವ್ಯಾಸ' ಪ್ರಶಸ್ತಿಗೆ ಗದುಗಿನ ಹಿರಿಯ ಕಲಾವಿದ, ಸಾಹಿತಿ ಡಾ.ಪಂ.ಪುಟ್ಟರಾಜ ಕವಿಗವಾಯಿಗಳವರ ಶಿಷ್ಯರಾದ ಸಿದ್ದೇಶ್ವರಶಾಸ್ತ್ರಿ ತೆಲ್ಲೂರ ಆಯ್ಕೆಯಾಗಿದ್ದಾರೆ.

ಜ. 31ರಂದು ಸಂಜೆ 6 ಗಂಟೆಗೆ ಬೆಂಗಳೂರಿನ ಜೆ.ಸಿ. ರಸ್ತೆಯ ರವೀಂದ್ರ ಕಲಾಕ್ಷೇತ್ರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಹನೀಯರಿಗೆ ಪ್ರಶಸ್ತಿ ಪ್ರದಾನ ನಡೆಯಲಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುವರು.

ತೆಲ್ಲೂರ ಶಾಸ್ತ್ರಿಗಳಿಗೆ 5 ಲಕ್ಷ ರೂ.ಗಳ ನಗದು, ಪ್ರಶಸ್ತಿ ಫಲಕ ಹಾಗೂ ಪ್ರಶಸ್ತಿ ಪುತ್ಥಳಿಯೊಂದಿಗೆ ಸನ್ಮಾನಿಸಲಾಗುವುದು. ಕವಿ ಕುಮಾರವ್ಯಾಸ ಮಹಾಕಾವ್ಯ ರಚಿಸಿದ ಗದಗ ಕ್ಷೇತ್ರದಲ್ಲಿ ಶಾಸ್ತ್ರೀಗಳಿಗೆ ಪ್ರಶಸ್ತಿ ಒಲಿದು ಬಂದಿರುವದು ಕಥಾಕೀರ್ತನಕಾರರಿಗೆ, ಸಾಹಿತಿಗಳಿಗೆ ಹರ್ಷವನ್ನುಂಟು ಮಾಡಿದೆ. ಗುರು ಡಾ.ಪಂ.ಪುಟ್ಟರಾಜರ ಶಿಷ್ಯರಾದ ತೆಲ್ಲೂರ ಶಾಸ್ತ್ರಿಗಳಿಗೆ ಪ್ರಶಸ್ತಿ ಪ್ರಕಟಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಸಚಿವ ಶಿವರಾಜ ತಂಗಡಗಿ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರನ್ನು ಅಭಿನಂದಿಸಿರುವ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯ ಡಾ.ಕಲ್ಲಯ್ಯಜ್ಜನವರು, ಶಾಸ್ತ್ರಿಗಳಿಂದ ಇನ್ನೂ ಹೆಚ್ಚಿನ ಸಾಧನೆ-ಸೇವೆ ಆಗಲಿ ಎಂದು ಹಾರೈಸಿದ್ದಾರೆ.

# ಫೆ. 1ರಂದು ಶ್ರೀ ಮಡಿವಾಳ ಮಾಚಿದೇವ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶ್ರೀ ಮಡಿವಾಳ ಮಾಚಿದೇವ ಜಯಂತಿ-2024 ಕಾರ್ಯಕ್ರಮವನ್ನು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 1ರಂದು ಬೆಳಿಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ಪಿ.ಪಿ.ಜಿ.ಕಲಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ರಾಜಶೇಖರ ದಾನರಡ್ಡಿ ಶ್ರೀ ಮಡಿವಾಳ ಮಾಚಿದೇವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಲಿದ್ದಾರೆ.

ಕು. ಮಲ್ಲೇಶ ಹೂಗಾರ ಮತ್ತು ತಂಡದವರಿಂದ ವಚನ ಗಾಯನ ಜರುಗಲಿದೆ.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಶಿಕ್ಷಣ ತಜ್ಞರು-ವಿದ್ಯಾರ್ಥಿಗಳ ಸಂವಾದ

# ನೀವೇ ನಿಮ್ಮ ಭವಿಷ್ಯದ ರೂವಾರಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಕಾಲೇಜು ಹಂತದ ಶಿಕ್ಷಣಕ್ಕೆ ಏಣಿಯಿದ್ದಂತೆ. ಈ ಅತ್ಯಮೂಲ್ಯವಾದ ಸಮಯವನ್ನು ವ್ಯರ್ಥ ಮಾಡದೇ ಉನ್ನತ ಗುರಿ ಹೊಂದಿ ಆ ನಿಟ್ಟಿನಲ್ಲಿ ಸತತಾಭ್ಯಾಸ, ಶ್ರದ್ಧೆ, ದೃಢ ಸಂಕಲ್ಪದಿಂದ ದಿಟ್ಟ ಹೆಜ್ಜೆ ಇಟ್ಟಾಗ ಮಾತ್ರ ಶ್ರೇಷ್ಠ ಸಾಧನೆ ಸಾಧ್ಯ ಎಂದು ರಾಷ್ಟ್ರ ಪ್ರಶಸ್ತಿ ವಿಜೇತ ಮೂಡಲಗಿ ಬಿಇಓ ಅಜಿತ ಮನ್ನಿಕೇರಿ ಹೇಳಿದರು.

ಅವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಪಟ್ಟಣದ ಚನ್ನಮ್ಮನ ವನದಲ್ಲಿ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಶಿಕ್ಷಣ ತಜ್ಞರೊಂದಿಗಿನ ವಿದ್ಯಾರ್ಥಿಗಳ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ನಿಮ್ಮ ಭವಿಷ್ಯದ ರೂವಾರಿಗಳು ನೀವೇ ಆಗಿದ್ದು, ನಿತ್ಯದ ಓದಿನಲ್ಲಿ ವೇಳಾಪಟ್ಟಿ ರಚಿಸಿಕೊಂಡು ತಪ್ಪದೇ ಪಾಲಿಸಬೇಕು. ಮೊಬೈಲ್ ನೋಡುತ್ತ ಸಮಯ ವ್ಯರ್ಥ ಮಾಡದೇ ಏಕಾಗ್ರತೆಯಿಂದ ಓದಿದರೆ ಪರೀಕ್ಷೆ ಬರೆಯಲು ಕಷ್ಟವಾಗುವುದಿಲ್ಲ. ವಿಷಯ ಅರ್ಥೈಸಿಕೊಂಡು ಓದಿ, ಓದಿದನ್ನು ಮನನ ಮಾಡಿಕೊಳ್ಳಿ. ನಿರ್ಲಕ್ಷ್ಯ, ಸೋಮಾರಿತನ, ನನ್ನಿಂದಾಗದು ಎಂಬ ಭಯ, ಕೀಳರಿಮೆ ತೊಡೆದು ಹಾಕಿ ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಿದಾಗ ಗೆಲುವು ಸಾಧ್ಯವಾಗುತ್ತದೆ ಎಂದರು.

ಶಿಕ್ಷಣ ತಜ್ಞ ಗೋಕಾಕ ಬಿಇಓ ಜೆ.ಬಿ. ಬಳಗಾರ ಮಾತನಾಡಿ, ಬದುಕಿನ ಭರವಸೆಗಾಗಿ, ಸಮಾಜದಲ್ಲಿ ವ್ಯಕ್ತಿಯ ಕುರಿತು ಭರವಸೆ ಮೂಡಿಸಲು ಪರೀಕ್ಷೆಗಳ ಅವಶ್ಯಕತೆ ಇದೆ ಎಂದರು. ಮಾನವ ಕಂಪ್ಯೂಟರ್ ಎಂದೇ ಖ್ಯಾತರಾದ ಅಥಣಿಯ ಬಸವರಾಜ ಉಮ್ರಾಣಿ ಏಕಾಗ್ರತೆ ಬೆಳೆಸಲು ಮಾಡಿದ ಹಲವಾರು ಚಟುವಟಿಕೆಗಳು ಎಲ್ಲರಲ್ಲೂ ಅಚ್ಚರಿ, ಆಸಕ್ತಿ ಮೂಡಿಸಿದವು. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪುರಸಭೆ ಸದಸ್ಯ ಎಸ್.ಕೆ. ಹವಾಲ್ದಾರ ಮಾತನಾಡಿದರು.

ಬಿಇಓ ಜಿ.ಎಂ ಮುಂದಿನಮನಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪುರಸಭೆ ಸದಸ್ಯೆ ವಾಣಿ ಹತ್ತಿ, ಎಂ.ಬಿ. ಹೊಸಮನಿ, ಡಿ.ಹೆಚ್. ಪಾಟೀಲ, ಬಿ.ಎಸ್. ಹರ್ಲಾಪುರ, ಎಲ್.ಎಸ್. ಅರಳಹಳ್ಳಿ, ಹೆಚ್.ಎಂ. ಗುತ್ತಲ, ಎ.ಎನ್. ಮುಳಗುಂದ, ಬಿ.ಎಸ್. ಹರ್ಲಾಪುರ, ಬಿ.ಸಿ. ಪಟ್ಟೇದ, ಸಿಆರ್‌ಪಿ ಸಂತೋಷ ತಡಸಲ, ಫಹೀಮ್ ಪಲ್ಲಿ, ಆರ್.ಕೆ. ಸಯ್ಯದ, ಎಸ್.ಡಿ. ಲಮಾಣಿ, ವಾಸು ದೀಪಾಲಿ, ಸಿಆರ್‌ಪಿಗಳಾದ ಸಿ.ವಿ. ವಡಕಣ್ಣವರ, ಲೋಕೇಶ ಮಠದ, ಗಿರೀಶ ನೇಕಾರ, ಎನ್.ಎ. ಮುಲ್ಲಾ, ನಾಗರಾಜ ಮಜ್ಜಿಗುಡ್ಡ, ನೇಹಾ ಮುಲ್ಲಾ, ಜಮೀರ ಬಂಕಾಪುರ ಸೇರಿ ಬಿಆರ್‌ಪಿ, ಸಿಆರ್‌ಪಿ, ಮುಖ್ಯ ಶಿಕ್ಷಕರು, ತಾಲೂಕಿನ ಹತ್ತಾರು ಶಾಲೆಗಳ ವಿದ್ಯಾರ್ಥಿಗಳಿದ್ದರು.

ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಜ್ಯೋತಿ ಗಾಯಕವಾಡ, ಉಮೇಶ ನೇಕಾರ, ಸತೀಶ ಬೋಮಲೆ ನಿರ್ವಹಿಸಿದರು. ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಡೆಸಿದ 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮ ಪ್ರಸಾರ ಮಾಡಲಾಯಿತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಡಾ.ಚಂದ್ರು ಲಮಾಣಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಉನ್ನತ ಶಿಕ್ಷಣಕ್ಕೆ ಬುನಾದಿಯಾಗಿದೆ. ಹೆತ್ತ ತಂದೆ-ತಾಯಿ, ಶಿಕ್ಷಕರು ನಿಮ್ಮ ಮೇಲೆ ಅಪಾರವಾದ ನಂಬಿಕೆ ಹೊಂದಿರುತ್ತಾರೆ. ವಿದ್ಯಾರ್ಥಿಗಳು ಉನ್ನತ ಗುರಿಯೊಂದಿಗೆ ಶ್ರದ್ಧೆ, ಸತತಾಭ್ಯಾಸದಿಂದ ಸಾಧನೆಯ ತುಡಿತದತ್ತ ಮನ ಮಿಡಿಯುತ್ತಿರಲಿ. ಎಲ್ಲ ವಿದ್ಯಾರ್ಥಿಗಳು ಹೆಚ್ಚು ಅಂಕಗಳನ್ನು ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗುವ ಮೂಲಕ ಕಲಿತ ಶಾಲೆಗೆ, ತಂದೆ-ತಾಯಿಗಳಿಗೆ ಕೀರ್ತಿ ತರಬೇಕು ಎಂದರು.

## ಮಂಡ್ಯದ ಕೆರೆಗೋಡು ಗ್ರಾಮದಲ್ಲಿ ಭಗವಾಧ್ವಜ ತೆರವು ಖಂಡಿಸಿ ಗದಗ ಜಿಲ್ಲಾ ಬಿಜೆಪಿ ಪ್ರತಿಭಟನೆ

# ರಾಜ್ಯ ಸರಕಾರದಿಂದ ಹಿಂದೂ ವಿರೋಧಿ ಧೋರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಡ್ಯದ ಕೆರಗೋಡು ಗ್ರಾಮದ ಧ್ವಜಸ್ತಂಭದಲ್ಲಿ ಹಾಕಲಾಗಿದ್ದ ಭಗವಾಧ್ವಜವನ್ನು ಜಿಲ್ಲಾಡಳಿತ ಇಳಿಸಿ ರಾಷ್ಟ್ರಧ್ವಜ ಹಾರಿಸಿರುವದನ್ನು ಖಂಡಿಸಿ ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿ ವತಿಯಿಂದ ಪ್ರತಿಭಟನೆ ನಡೆಸಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಿದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರಡಗಿ ಮಾತನಾಡಿ, ಮಂಡ್ಯ ಜಿಲ್ಲೆಯ ಕೆರೆಗೋಡಿನಲ್ಲಿ ಸ್ಥಳೀಯ ಗ್ರಾಮ ಪಂಚಾಯತ್ ಅನುಮತಿಯೊಂದಿಗೆ ಹನುಮ ಧ್ವಜವನ್ನು ಆರೋಹಣ ಮಾಡಲಾಗಿತ್ತು. ಸ್ಥಳೀಯ ಗ್ರಾ.ಪಂ ಸರ್ವಾನುಮತದ ನಿರ್ಣಯದೊಂದಿಗೆ, ಸ್ವಂತ ಖರ್ಚಿನಲ್ಲಿ ಈ ಧ್ವಜವನ್ನು ಹಾರಿಸಲಾಗಿತ್ತು. ಸರಕಾರ, ಜಿಲ್ಲಾ ಸಚಿವರು ಮತ್ತು ಸ್ಥಳೀಯ ಶಾಸಕರ ಪ್ರಚೋದನೆಯಿಂದ ಅದನ್ನು ಇಳಿಸಲಾಗಿದೆ. ಪೊಲೀಸ್ ಬಲವನ್ನು ದುರ್ಬಳಕೆ ಮಾಡಿ ಈ ಕೃತ್ಯ ನಡೆಸಿರುವುದನ್ನು ನಾವು ಖಂಡಿಸುತ್ತೇವೆ. ರಾಜ್ಯ ಸರಕಾರವು ನಿರಂತರವಾಗಿ ಹಿಂದೂ ವಿರೋಧಿ ಧೋರಣೆ ಅನುಸರಿಸುತ್ತಿದ್ದು, ದೌರ್ಜನ್ಯ, ದಬ್ಬಾಳಿಕೆ ನಡೆಸುತ್ತಿದೆ. ಒಂದು ಧರ್ಮದ ಪರವಾಗಿ ತುಷ್ಟೀಕರಣ ನೀತಿಯನ್ನು ಅನುಸರಿಸುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಹಿರಿಯರಾದ ಎಂ.ಎಸ್. ಕರೀಗೌಡ್ರ, ಗದಗ ಶಹರ ಘಟಕದ ಅಧ್ಯಕ್ಷ ಅನಿಲ ಅಬ್ಬಿಗೇರಿ, ರವಿ ದಂಡಿನ, ಸಿದ್ರಾಮಪ್ಪ ಮೊರಬದ, ಮಂಜು ಮೆಣಸಗಿ, ಜಗನ್ನಾಥಸಾ ಭಾಂಡಗೆ, ವಿನಾಯಕ ಮಾನ್ವಿ, ನಾಗರಾಜ ತಳವಾರ, ಮಾಂತೇಶ ನಲವಡಿ, ಮಾಧುಸಾ ಮೇರವಾಡೆ, ಸುಧೀರ ಕಾಟಿಗರ, ಅಮರನಾತ ಗಡಗಿ, ಶಂಕರ ಕಾಕಿ, ಬೂದಪ್ಪ ಹಳ್ಳಿ, ಮಂಜುನಾಥಸ್ವಾಮಿ, ಅಶೋಕ ಕರೂರ, ರಮೇಶ ಸಜ್ಜಗಾರ, ಮಾಂತೇಶ ಬಾತಾಖಾನಿ, ಮಾಧುಸಾ ಮೇರವಾಡೆ, ಮಂಜುನಾಥ ಶಾಂತಗೇರಿ, ಲಕ್ಷ್ಮಣ ದೊಡ್ಮನಿ, ಮಂಜುನಾಥ ತಳವಾರ, ದೇವೇಂದ್ರಪ್ಪ ಹೂಗಾರ, ಕಿಶನ ಮೇರವಾಡೆ, ಮಂಜುನಾಥ ವಡ್ಡರ, ವಂದನಾ ವರ್ಣೇಕರ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ವಿಶ್ವನಾಥ ಶಿರಿಗಣ್ಣವರ ಸೇರಿದಂತೆ ಪಕ್ಷದ ಹಿರಿಯರು, ಕಾರ್ಯಕರ್ತೆಯರು, ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.



## ಬಿಸಿಯೂಟ ಅಡುಗೆ ಸಿಬ್ಬಂದಿಗಳ ತರಬೇತಿ ಕಾರ್ಯಾಗಾರದಲ್ಲಿ ಮಿಥುನ ಪಾಟೀಲ

# ದೇಶದ ಪ್ರಗತಿಗೆ ಶಿಕ್ಷಣ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸರ್ಕಾರಿ ಶಾಲೆಯ ಮಕ್ಕಳಿಗೆ ಹಲವಾರು ಯೋಜನೆಗಳ ಮೂಲಕ ಶಿಕ್ಷಣಕ್ಕೆ ಸರ್ಕಾರ ಪ್ರೋತ್ಸಾಹ ನೀಡುತ್ತಿದ್ದು, ವಿದ್ಯಾರ್ಥಿಗಳು ಸರ್ಕಾರದ ಯೋಜನೆಗಳ ಲಾಭವನ್ನು ಪಡೆದುಕೊಳ್ಳಲು ಮುಂದಾಗಬೇಕು ಎಂದು ರೋಣ ಪುರಸಭೆ ಉಪಾಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಪ್ರಧಾನಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆ ಅಡಿಯಲ್ಲಿ ನಡೆದ ಬಿಸಿಯೂಟ ಅಡುಗೆ ಸಿಬ್ಬಂದಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿನ ಮಕ್ಕಳು ಅಪೌಷ್ಟಿಕತೆ ಹಾಗೂ ಹಸಿವಿನಿಂದ ಬಳಲಬಾರದು ಎಂಬ ಉದ್ದೇಶದಿಂದ ಸರ್ಕಾರ ಮಧ್ಯಾಹ್ನದ ಬಿಸಿಯೂಟ, ಮೊಟ್ಟೆ ಹಾಗೂ ಹಾಲು ವಿತರಣೆಗೆ ಮುಂದಾಗಿದೆ. ಬಿಸಿಯೂಟ ಯೋಜನೆ ಯಶಸ್ಸಿಗೆ ಅಡುಗೆ ಸಿಬ್ಬಂದಿ ಪಾತ್ರವೂ ಮುಖ್ಯವಾಗಿದೆ. ಹೀಗಾಗಿ ಅಡುಗೆ ಸಿಬ್ಬಂದಿ ಸ್ವಚ್ಛತೆ ಕಾಪಾಡಿ, ತರಕಾರಿ, ಪಡಿತರ ಸ್ವಚ್ಛಗೊಳಿಸಿ ಅಡುಗೆ ಮಾಡಿ ಮಕ್ಕಳಿಗೆ ಉಣಬಡಿಸಬೇಕು ಎಂದ ಅವರು, ಅಡುಗೆ ಸಿಬ್ಬಂದಿಗಳ ಬೇಡಿಕೆಗಳನ್ನು ಶಾಸಕರ ಮೂಲಕ ಸರ್ಕಾರಕ್ಕೆ ತಲುಪಿಸಿ, ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಕ್ಲಸ್ಟರ್ ಮಟ್ಟದ ಉತ್ತಮ ಅಡುಗೆ ಸಿಬ್ಬಂದಿ ಸ್ಪರ್ಧೆಯಲ್ಲಿ ವಿಜೇತರಾದ ಅಡುಗೆ ತಯಾರಕರನ್ನು ಸನ್ಮಾನಿಸಲಾಯಿತು. ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎನ್. ಹುರಳಿ, ವಿ.ಎ. ಹಾದಿಮನಿ, ಪ್ರೌಢಶಾಲೆ ಮುಖ್ಯ ಶಿಕ್ಷಕ ಬಿ.ವಿ. ಕಡಬಿನ, ಕೆ.ಎ. ಹಾದಿಮನಿ, ಎ.ಕೆ. ಒಂಟಿ, ಮಂಜುಳಾ ರೇವಡಿ, ಅಗ್ನಿಶಾಮಕ ಇಲಾಖೆಯ ಮುತ್ತಣ್ಣ ಪ್ರಧಾನಿ, ರಾಹುಲ್ ಬಾಗೇವಾಡಿ, ಸಿಆರ್‌ಪಿಗಳಾದ ಪ್ರಕಾಶ ಅಂಬೋರೆ, ಕೆ.ಎಸ್. ವನ್ನಾಲ, ಶ್ರೀಧರ್ ಯಂಕಂಚಿ ಸೇರಿ ಅಡುಗೆ ಸಿಬ್ಬಂದಿಗಳಿದ್ದರು.



ರೋಣ, ಗಜೇಂದ್ರಗಡ ತಾಲೂಕು ಅಕ್ಷರ ದಾಸೋಹ ಅಧಿಕಾರಿ ಬಸವರಾಜ ಅಂಗಡಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ರೈತರು, ಕಾರ್ಮಿಕರು ಮಧ್ಯಾಹ್ನ ಹೊಲಗಳಿಗೆ ಹೋಗುವುದರಿಂದ ಮಕ್ಕಳಿಗೆ ಊಟದ ಸಮಸ್ಯೆ ಆಗದಿರಲಿ ಎಂದು ಸರ್ಕಾರ ದೂರ ದೃಷ್ಟಿಯಿಂದ ಮಧ್ಯಾಹ್ನದ ಬಿಸಿಯೂಟ, ಕ್ಷೀರ ಭಾಗ್ಯ, ಅಪೌಷ್ಟಿಕತೆ ನಿವಾರಿಸಲು ಮೊಟ್ಟೆ, ಶೇಂಗಾ ಚಿಕ್ಕಿ ವಿತರಿಸುತ್ತಿದೆ. ನೂರಾರು ಮಕ್ಕಳಿಗೆ ಅಡುಗೆ ಮಾಡಿ ಉಣಬಡಿಸುವ ಅಡುಗೆ ಸಿಬ್ಬಂದಿಗಳು ಶುಚಿಯಾಗಿ, ರುಚಿಯಾಗಿ ಅಡುಗೆ ಮಾಡುವುದರ ಜೊತೆಗೆ ನಿಮ್ಮ ಆರೋಗ್ಯದ ಕಡೆಗೆ ಗಮನ ಹರಿಸಬೇಕು ಎಂದರು.

# ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಬಾಲವಿಜ್ಞಾನಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕಲಬುರ್ಗಿಯ ಸೇಡಂದಲ್ಲಿ ನಡೆದ 31ನೇ ರಾಜ್ಯಮಟ್ಟದ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಗದಗ ಜಿಲ್ಲೆಯ ಪ್ರತಿಭಾನ್ವಿತ ವಿದ್ಯಾರ್ಥಿನಿಯರು ಮಂಡಿಸಿದ ವಿಜ್ಞಾನ ಯೋಜನೆಯು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು, ಯೋಜನೆಯನ್ನು ಪ್ರಸ್ತುತಪಡಿಸಿದ ಈರ್ವರು ವಿದ್ಯಾರ್ಥಿನಿಯರನ್ನು ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಸೇಡಂದ ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಂಸ್ಥೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಭಾರತೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ ಭಾರತ ಸರಕಾರ ನವದೆಹಲಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಕರ್ನಾಟಕ ರಾಜ್ಯ ಸರಕಾರ ಆಶ್ರಯದಲ್ಲಿ ಇತ್ತಿಚೆಗೆ 31ನೇ ರಾಜ್ಯಮಟ್ಟದ ಮಕ್ಕಳ ವಿಜ್ಞಾನ ಸಮಾವೇಶ ಜರುಗಿತು.

'ಆರೋಗ್ಯ ಮತ್ತು ಯೋಗಕ್ಷೇಮಕ್ಕಾಗಿ ಜೀವಿ ಪರಿಸರ ವ್ಯವಸ್ಥೆಯನ್ನು ಅರ್ಥ ಮಾಡಿಕೊಳ್ಳೋಣ' ಎಂಬ ವಿಷಯದ ಅಡಿಯಲ್ಲಿ 'ಅಳಿವಿನ ಅಂಚಿನಲ್ಲಿರುವ ಸಸ್ಯಗಳ-ಔಷಧೀಯ ಮುತ್ತುಗಳು' ಯೋಜನೆ ಕುರಿತು ಶಿರಹಟ್ಟಿಯ ಶ್ರೀ ಫಕ್ಕೀರ ಚನ್ನವೀರೇಶ್ವರ ಆಂಗ್ಲ ಮಾಧ್ಯಮ ಶಾಲೆಯ 8ನೇ ವರ್ಗದ ವಿದ್ಯಾರ್ಥಿನಿಯರಾದ ಪೂಜಾ ಕೆ.ಸ್ವಾಮಿ ಹಾಗೂ ಸಂತೃಪ್ತಿ ಎಂ.ಮಾಬಳಿ ವಿಜ್ಞಾನ ಶಿಕ್ಷಕ ಏಕಾಂತ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ ಯೋಜನೆ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿತ್ತು.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಕ.ರಾ.ವಿ.ಪ ರಾಜ್ಯ ಕಾರ್ಯಕಾರಿ ಮಂಡಳಿ ಸದಸ್ಯ ಅನ್ನದಾನೇಶ್ವರ ಹಳ್ಳಿಕೇರಿ, ಜಿಲ್ಲಾ ಸಂಯೋಜಕ ಜಗದೀಶ ಯಾಳಗಿ, ಜಿಲ್ಲಾ ಘಟಕದ ಅಧ್ಯಕ್ಷ ರಮೇಶ ಹಳೇರಿತ್ತಿ, ಪ್ರಧಾನ ಕಾರ್ಯದರ್ಶಿ ವೀರನಗೌಡ ಮರಿಗೌಡರ್, ಎನ್.ವ್ಹಿ. ಜೋಷಿ, ಜಿಲ್ಲಾ ಘಟಕದ ಸರ್ವ ಪದಾಧಿಕಾರಿಗಳಿದ್ದರು.

## ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯಿಂದ ಇಂದು ಕಾರ್ಯಕ್ರಮ ಆಯೋಜನೆ

# ಮಹಾತ್ಮ ಗಾಂಧೀಜಿ ಪುಣ್ಯತಿಥಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜ.30ರ ಬೆಳಿಗ್ಗೆ 9.30ಕ್ಕೆ ಮಹಾತ್ಮ ಗಾಂಧೀಜಿಯವರ ಪುಣ್ಯತಿಥಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಕಾನೂನು, ನ್ಯಾಯ, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಮಾನವ ಹಕ್ಕುಗಳು ಹಾಗೂ ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ, ಗದಗ ಜಿಲ್ಲಾ ಕಾಂಗ್ರೆಸ್ ಕಮಿಟಿ ಅಧ್ಯಕ್ಷರು ಹಾಗೂ ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಉಪಸ್ಥಿತರಿರುವರು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು-ಸದಸ್ಯರು, ನಗರಸಭೆ, ಪ.ಪಂ., ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್ಸಿ/ಎಸ್ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೆತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

# ವಿದ್ಯಾರ್ಥಿಗಳು ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕಳೆದ ಬಾರಿ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನಗಳಿಸಿದ್ದ ಶಿರಹಟ್ಟಿ ತಾಲೂಕಿನ ಫಲಿತಾಂಶ ಈ ಬಾರಿಯೂ ಸಹ ಉತ್ತಮ ಅಂಕ ಗಳಿಸುವುದರ ಮೂಲಕ ತಾಲೂಕಿಗೆ ಕೀರ್ತಿ ತರುವಂತವರಾಗಬೇಕೆಂದು ಶಿರಹಟ್ಟಿ ತಾಲೂಕಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಶರಣಬಸವ ಪಾಟೀಲ ಹೇಳಿದರು.

ಅವರು ಸೋಮವಾರ ಶಿರಹಟ್ಟಿಯ ಡಿ.ದೇವರಾಜ ಅರಸು ಭವನದಲ್ಲಿ ಶಿಕ್ಷಣ ಇಲಾಖೆ ವತಿಯಿಂದ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಶಿಕ್ಷಣ ತಜ್ಞರೊಂದಿಗೆ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆ ಮತ್ತು ಗುಣಮಟ್ಟದ ಶಿಕ್ಷಣ ನೀಡಲು ಇಲಾಖೆಯು ಹಲವಾರು ರೀತಿಯಲ್ಲಿ ಶ್ರಮಿಸುತ್ತಿದ್ದು, ಇವೆಲ್ಲವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಶಾಲೆಗಳಲ್ಲಿ ಶಿಕ್ಷಕರು ಬೋಧಿಸುವ ಪಾಠಗಳನ್ನು ಚೆನ್ನಾಗಿ ಅರ್ಥೈಸಿಕೊಂಡು ಸತತ ಪರಿಶ್ರಮದಿಂದ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಬೇಕು. ಯಾವುದೇ ಭಯಕ್ಕೆ ಒಳಗಾಗದೇ ಪರೀಕ್ಷೆಗೆ ಸಂಬಂಧಿಸಿದ ಎಲ್ಲ ಕಾರ್ಯಾಗಾರಗಳಲ್ಲಿ ಭಾಗವಹಿಸಿ ತಾಲೂಕಿಗೆ ಕೀರ್ತಿ ತರಬೇಕೆಂದು ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಇಓ ಜಿ.ಎಂ. ಮುಂದಿನಮನಿ ವಹಿಸಿದ್ದರು. ಮೂಡಲಗಿಯ ಬಿಇಓ ಅಜಿತ ಮನ್ನಿಕೇರಿ, ಬಸವರಾಜ ಉಮ್ರಾಣಿ, ಜಿ.ಡಿ. ಈರಕ್ಕನವರ, ಬಿ.ಎಸ್. ಹರ್ಲಾಪೂರ, ಜಿ.ಎಸ್. ಸರವಿ, ಜಿ.ಆಯ್. ಹಳ್ಳದ, ಆಯ್.ಆರ್. ಪವಾರ, ಎಂ.ಎ. ಮಕಾನದಾರ, ಉಮೇಶ.ಎಚ್., ಎನ್.ಎನ್. ಸಾವಿರಕುರಿ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka